ಸಂಪುಟ 01 | ಸಂಚಿಕೆ 124 | ಶುಕ್ರವಾರ 10 ಜುಲೈ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಜಾಗತಿಕ ಇಂಧನ ಸ್ವಾವಲಂಬನೆ ದಿನÀ (Global Energy Independence Day) ? ನವೀಕರಿಸಬಹುದಾದ ಇಂಧನ ಬಳಕೆ ಮತ್ತು ಇಂಧನ ಸ್ವಾವಲಂಬನೆ ಬಗ್ಗೆ ಜಾಗೃತಿ ಮೂಡಿಸುವ ದಿನ.

2) ರಾಷ್ಟ್ರೀಯ ಕಿಟನ್ ದಿನ (National Kitten Day) ? ಬೆಕ್ಕಿನ ಮರಿಗಳನ್ನು ದತ್ತು ಪಡೆಯಲು ಮತ್ತು ಅವುಗಳ ಆರೈಕೆಯ ಮಹತ್ವವನ್ನು ತಿಳಿಸುವ ದಿನ (ಅಮೆರಿಕದಲ್ಲಿ ಆಚರಣೆ).

3) ರಾಷ್ಟ್ರೀಯ ಪಿನಾ ಕೊಲಾಡಾ ದಿನ (National Piña Colada Day) ? ಪ್ರಸಿದ್ಧ ಉಷ್ಣವಲಯದ ಪಾನೀಯವನ್ನು ಆಚರಿಸುವ ದಿನ (ಅಮೆರಿಕದಲ್ಲಿ).

## ಸುಭಾಷಿತ

ನಮ್ಮ ಆಚಾರ ವಿಚಾರಗಳಿಂದ ಮಾತ್ರ
ನಾವು ಉತ್ತಮರು ಅಥವಾ ಅಧಮರು
ಎನಿಸಿಕೊಳ್ಳುತ್ತೇವೆಯೇ ವಿನಾ ಜಾತಿಯಿಂದಲ್ಲ.

–ಬಸವಣ್ಣ

# ಭಾರತಕ್ಕೆ ಆಸ್ಟ್ರೇಲಿಯಾ ಯುರೇನಿಯಂ ಪೂರೈಕೆ ಮಹತ್ವದ ಒಪ್ಪಂದ

**ನೈಜ್ಯ ದೆಸೆ ನ್ಯೂಸ್**



**ಮೆಲ್ಬೋರ್ನ್: ಭಾರತದ ಶುದ್ಧ ಇಂಧನ ಗುರಿಗಳಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಪರಮಾಣು ಇಂಧನ ಕ್ಷೇತ್ರದಲ್ಲಿ ಉಭಯ ದೇಶಗಳು ಪ್ರಮುಖ ಒಪ್ಪಂದಕ್ಕೆ ಸಹಿ ಹಾಕಿದ ನಂತರ, ಆಸ್ಟ್ರೇಲಿಯಾ ಭಾರತಕ್ಕೆ ಯುರೇನಿಯಂ ಪೂರೈಸಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಘೋಷಿಸಿದರು.**

ಜಂಟಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪರಮಾಣು ಇಂಧನ ವಲಯದಲ್ಲಿ ನಾವು ಇಂದು ಒಂದು ಪ್ರಮುಖ ಒಪ್ಪಂದಕ್ಕೆ ಸಹಿ ಹಾಕಿದ್ದೇವೆ. ಇದು ಆಸ್ಟ್ರೇಲಿಯಾದಿಂದ ಭಾರತಕ್ಕೆ ಯುರೇನಿಯಂ ಪೂರೈಕೆಗೆ ದಾರಿ ಮಾಡಿಕೊಡುತ್ತದೆ ಮತ್ತು ಇದು ನಮ ಶುದ್ಧ ಇಂಧನ ಗುರಿಗೆ ಹೊಸ ಬಲ ನೀಡುತ್ತದೆ. ನಿರ್ಣಾಯಕ ಖನಿಜಗಳ ಕ್ಷೇತ್ರದಲ್ಲಿ ನಮ ಸಹಕಾರವು ನಮ ಕಾರ್ಯತಂತ್ರದ ಭದ್ರತೆ ಮತ್ತು ಶುದ್ಧ ಇಂಧನ ಪರಿವರ್ತನೆಗೆ ಮುಖ್ಯವಾಗಿದೆ. ನಾವು ನಿರ್ಣಾಯಕ ಖನಿಜ ಕಾರಿಡಾರ್‌ನಲ್ಲಿಯೂ ಕೆಲಸ ಮಾಡುತ್ತೇವೆ ಎಂದರು.

ಇಂದು ನಾವು ವಿಶ್ವದ ಕ್ರೀಡಾ ರಾಜಧಾನಿ ಮೆಲ್ಬೋರ್ನ್‌ನಲ್ಲಿದ್ದೇವೆ, ಕ್ರೀಡೆಗಳ ಬಗ್ಗೆ ಮಾತನಾಡದಿರುವುದು ಕ್ರಿಕೆಟ್ ಪಂದ್ಯದಲ್ಲಿ ಟಾಸ್ ಗೆದ್ದು ಆಟವನ್ನು ಎಂದಿಗೂ ಪ್ರಾರಂಭಿಸದಂತಾಗುತ್ತದೆ. ಭಾರತ ಮತ್ತು ಆಸ್ಟ್ರೇಲಿಯಾ ಸಂಬಂಧಗಳಲ್ಲಿ ಕ್ರಿಕೆಟ್ ರಾಜತಾಂತ್ರಿಕ ಭಾಷೆಯಾಗಿದೆ. ಹಲವು ವಿಧಗಳಲ್ಲಿ ನಮ ಸಭೆಗಳು ಕ್ರಿಕೆಟ್ ಆಟದಂತಿವೆ.

ನಮ ನಿರ್ಧಾರಗಳು ಟಿ-20 ಪಂದ್ಯದಂತೆ ವೇಗವಾಗಿರುತ್ತವೆ. ಮುಂಬರುವ ವರ್ಷಗಳಲ್ಲಿ ನಮ ಎರಡೂ ದೇಶಗಳು ಒಲಿಂಪಿಕ್ ಕ್ರೀಡಾಕೂಟ ಮತ್ತು ಕಾಮನ್‌ವೆಲ್ತ್ ಕ್ರೀಡಾಕೂಟಗಳಂತಹ ಪ್ರಮುಖ ಕ್ರೀಡಾಕೂಟಗಳನ್ನು ಆಯೋಜಿಸುತ್ತವೆ. ಇದು ನಮ ಕ್ರೀಡಾ ಸಹಕಾರವನ್ನು ಬಲಪಡಿಸುವುದಲ್ಲದೆ, ಕ್ರೀಡಾ ಮೂಲಸೌಕರ್ಯದಲ್ಲಿ ಹೂಡಿಕೆ ಮಾಡಲು ಹಲವಾರು ಅವಕಾಶಗಳನ್ನು ಸೃಷ್ಟಿಸುತ್ತದೆ ಎಂದು ಬಣ್ಣಿಸಿದರು.

ತಮ ಮೂರು ರಾಷ್ಟ್ರಗಳ ಭೇಟಿಯ ಎರಡನೇ ಹಂತದ ಸಂದರ್ಭದಲ್ಲಿ ದ್ವಿಪಕ್ಷೀಯ ವ್ಯಾಪಾರ ಮತ್ತು ಕಾರ್ಯತಂತ್ರದ ಸಂಬಂಧಗಳನ್ನು ಬಲಪಡಿಸುವ ಪ್ರಯತ್ನಗಳ ಭಾಗವಾಗಿ ಪ್ರಧಾನಿ ಮೋದಿ ಅವರು ಇಂದು ಬೆಳಗ್ಗೆ ಆಸ್ಟ್ರೇಲಿಯಾದ ತಮ ಸಹವರ್ತಿ ಆಂಥೋನಿ ಅಲ್ಬನೀಸ್ ಅವರೊಂದಿಗೆ ಭಾರತ-ಆಸ್ಟ್ರೇಲಿಯಾ ಸಿಇಒ ವೇದಿಕೆ ಮತ್ತು ಆರ್ಥಿಕ ಮಾರ್ಗಸೂಚಿ ವ್ಯವಹಾರ ಸ್ವಾಗತ ಕಾರ್ಯಕ್ರಮದಲ್ಲೂ ಭಾಗವಹಿಸಿದ್ದರು.


ಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ನಿಮೆಲ್ಲರ ಉಪಸ್ಥಿತಿಯು ನಮ ಹಂಚಿಕೆಯ ವಿಶ್ವಾಸ ಮತ್ತು ಹಂಚಿಕೆಯ ಆಕಾಂಕ್ಷೆಗಳ ಸಂಕೇತವಾಗಿದೆ. ಇಂದು ಜಗತ್ತು ಅನಿಶ್ಚಿತತೆ, ಪೂರೈಕೆ ಸರಪಳಿ ಅಡಚಣೆಗಳು ಮತ್ತು ಇಂಧನ ಬಿಕ್ಕಟ್ಟಿನ ಅವಧಿಯನ್ನು ಎದುರಿಸುತ್ತಿದೆ. ಅಂತಹ ಸಮಯದಲ್ಲಿ ಭಾರತ ಮತ್ತು ಆಸ್ಟ್ರೇಲಿಯಾ ನೈಸರ್ಗಿಕ ಮತ್ತು ವಿಶ್ವಾಸಾರ್ಹ ಪಾಲುದಾರರಾಗಿ ಮುಂದುವರಿಯುವುದು ಸಹಜ ಮತ್ತು ಅವಶ್ಯಕವಾಗಿದೆ. ಕಳೆದ ಕೆಲವು ವರ್ಷಗಳಿಂದ, ಎರಡೂ ದೇಶಗಳ ಸಾಮರ್ಥ್ಯಗಳನ್ನು ಸಂಯೋಜಿಸುವ ಮೂಲಕ ಭವಿಷ್ಯದ ಸಹಕಾರಕ್ಕಾಗಿ ನಾವು ಬಲವಾದ ಚೌಕಟ್ಟನ್ನು ನಿರ್ಮಿಸಿದ್ದೇವೆ ಎಂದು ಹೇಳಿದರು.

ಇಂಡೋನೇಷ್ಯಾ ಭೇಟಿ ಮುಗಿಸಿ ಬುಧವಾರ ಆಸ್ಟ್ರೇಲಿಯಾಕ್ಕೆ ಬಂದಿಳಿದ ಪ್ರಧಾನಿಯವರಿಗೆ ಮೆಲ್ಬೋರ್ನ್‌ನಲ್ಲಿ ಭಾರತೀಯ ಅನಿವಾಸಿಗಳು ಭವ್ಯ ಸ್ವಾಗತ ಕೋರಿದರು.

## ಕನಿಷ್ಠ ಬೆಂಬಲ ಬೆಲೆಯ ಬಾಕಿ ಹಣ ಬಿಡುಗಡೆಗೆ ಕೇಂದ್ರಕ್ಕೆ ಕೆ.ಎಚ್.ಮುನಿಯಪ್ಪ ಮನವಿ

**ನೈಜ್ಯ ದೆಸೆ ನ್ಯೂಸ್**

**ನವದೆಹಲಿ: ರಾಜ್ಯಕ್ಕೆ ಬರಬೇಕಿದ್ದ ಕನಿಷ್ಠ ಬೆಂಬಲ ಬೆಲೆ ಯೋಜನೆಯ ಅನುದಾನ ಬಿಡುಗಡೆ ಮಾಡಬೇಕೆಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ಅವರು ಕೇಂದ್ರ ಸಚಿವ ಪಹ್ಲಾದ್ ಜೋಶಿಯವರಲ್ಲಿ ಮನವಿ ಮಾಡಿದ್ದಾರೆ.**



ದೆಹಲಿಯಲ್ಲಿ ಆಹಾರ ಮತ್ತು ಸಾರ್ವಜನಿಕ ವಿತರಣಾ ಸಚಿವ ಪ್ರಹ್ಲಾದ್ ಜೋಶಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ ಅವರು, ಕೆಎಂಎಸ್ 2025-26ರಲ್ಲಿ ರಾಜ್ಯವು 5.69 ಲಕ್ಷ ಮೆಟ್ರಿಕ್ ಟನ್ ರಾಗಿ, 2.21 ಲಕ್ಷ ಮೆಟ್ರಿಕ್ ಟನ್ ಜೋಳ ಹಾಗೂ 0.0567 ಲಕ್ಷ ಮೆಟ್ರಿಕ್ ಟನ್ ಭತ್ತ ಖರೀದಿ ಮಾಡಿದ್ದು, ಈ ಪೈಕಿ ಕೇಂದ್ರ ಸರ್ಕಾರ ಇದುವರೆಗೆ 190.10 ಕೋಟಿ ಬಿಡುಗಡೆ ಮಾಡಿದೆ. ಉಳಿದ 4,232.07 ಕೋಟಿ ಮರುಪಾವತಿಯನ್ನು ಶೀಘ್ರ ಬಿಡುಗಡೆ ಮಾಡುವಂತೆ ಮನವಿ ಮಾಡಿದರು. ಅಲ್ಲದೆ ಕೆಎಂಎಸ್ 2022-23ಕ್ಕೆ ಸಂಬಂಧಿಸಿದ 375.99 ಕೋಟಿ ತಾತ್ಕಾಲಿಕ ಸಬ್ಸಿಡಿ ಹಕ್ಕುಪತ್ರವು ಕೇಂದ್ರ ಸರ್ಕಾರದ ಪರಿಶೀಲನೆಯಲ್ಲಿದ್ದು, ಅದನ್ನೂ ಶೀಘ್ರ ಮಂಜೂರು ಮಾಡುವಂತೆ ಕೋರಿದರು. ಇದರ ಜೊತೆಗೆ ಕೆಎಂಎಸ್ 2009-10 ರಿಂದ 2024-25ರವರೆಗಿನ ಅವಧಿಗೆ ಸಂಬಂಧಿಸಿದ 1,902.58 ಕೋಟಿ ಎಂಎಸ್ಪಿ ಬಾಕಿ ಮರುಪಾವತಿ ಮೊತ್ತವನ್ನು ಶೀಘ್ರ ಬಿಡುಗಡೆ ಮಾಡುವಂತೆ ಮುನಿಯಪ್ಪ ಮನವಿ ಮಾಡಿದರು.

# ಹೆಚ್ಚುವರಿಯಾಗಿ ಡಾಟಾ ಎಂಟ್ರಿ ಆಪರೇಟರ್ ನೇಮಕಕ್ಕೆ ಆಗ್ರಹ

**ನೈಜ್ಯ ದೆಸೆ ನ್ಯೂಸ್**



**ಬಳ್ಳಾರಿ / ಕಂಪ್ಲಿ: ಸರ್ಕಾರದ ವಿವಿಧ ಯೋಜನೆಗಳಿಗಾಗಿ ನಾನಾ ಅರ್ಜಿಗಳನ್ನು ಸಲ್ಲಿಸಲು ತುಂಬಾ ಸಮಸ್ಯೆ ಉಂಟಾಗುತ್ತಿದ್ದು, ಇದರಿಂದ ಕೂಡಲೇ ಹೆಚ್ಚುವರಿಯಾಗಿ ಡಾಟಾ ಆಪರೇಟರ್ ನೇಮಿಸಬೇಕೆಂದು ಆಗ್ರಹಿಸಿ, ಭೀಮ್ ಆರ್ಮಿ ಪದಾಧಿಕಾರಿಗಳು ಪಟ್ಟಣದಲ್ಲಿ ತಹಶೀಲ್ದಾರ್ ಕಚೇರಿಯಲ್ಲಿ ತಹಶೀಲ್ದಾರ್ ಜೂಗಲ್ ಮಂಜುನಾಯಕಗೆ ಮನವಿ ಪತ್ರ ಸಲ್ಲಿಸಿದರು.**

ನಂತರ ಭೀಮ್ ಆರ್ಮಿಯ ಗೌರವಾಧ್ಯಕ್ಷ ಸಣಾಪುರ ಮರಿಸ್ವಾಮಿ ಮಾತನಾಡಿ, ತಾಲೂಕು ಕೇಂದ್ರವಾಗಿ ಕೆಲ ವರ್ಷಗಳು ಕಳೆದಿವೆ. ಇಲ್ಲಿನ ಜನಸಂಖ್ಯೆ ಹೆಚ್ಚಾಗುವ ಜೊತೆಗೆ ಸರ್ಕಾರದ ಸೌಲಭ್ಯಗಳನ್ನು ಜನತೆಗೆ ತಲುಪಿಸಬೇಕಾಗಿದೆ. ಇಲ್ಲಿನ ಕಂದಾಯ ಇಲಾಖೆಯ ನಾಡ ಕಛೇರಿಯಲ್ಲಿ ಹಲವು ವರ್ಷಗಳಿಂದ ಒಬ್ಬರೇ ಡಾಟಾ ಆಪರೇಟರ್ ಇದ್ದಾರೆ. ಆದರೆ, ಇತ್ತೀಚೆಗೆ ಜನಸಂಖ್ಯೆ ಹೆಚ್ಚಾದಂತೆಲ್ಲಾ ಅರ್ಜಿದಾರರು ಹೆಚ್ಚಾಗುತ್ತಿದ್ದಾರೆ. ಜಾತಿ, ಆದಾಯ, ಹೊಸ ಎ,ಬಿ,ಸಿ ತಿದ್ದುಪಡಿ, ವಿಧವಾ ವೇತನ, ಸರ್ವೆ ಅರ್ಜಿ ಸೇರಿ ವಿವಿಧ ಅರ್ಜಿಗಳನ್ನು ಸಲ್ಲಿಸಲು ಗ್ರಾಮೀಣ ಭಾಗದ ಜನರು ಮತ್ತು ರೈತರು ಶಾಲಾ ಮಕ್ಕಳು ಬಹಳಷ್ಟು ಜನರು ಬರುತ್ತಾರೆ.

ಆದರೆ, ಒಬ್ಬ ಡಾಟಾ ಆಪರೇಟರ್ ಎಲ್ಲಾ ಜನರ ಅರ್ಜಿ ಸ್ವೀಕರಿಸಲು ಬಹಳ ತೊಂದರೆಯಾಗುತ್ತದೆ. ಈ ಕಾರ್ಯಾಲಯದಲ್ಲಿ ಸರ್ಕಾರ ನಿಗಧಿಪಡಿಸಿದ ಧರಪಟ್ಟಿ ಹಾಕಿ, ಶ್ರೀಘದಲ್ಲಿ ಹೆಚ್ಚುವರಿಯಾಗಿ ಡಾಟಾ ಎಂಟ್ರಿ ಆಪರೇಟರ್ ನೇಮಿಸಬೇಕು ಎಂದರು. ಭೀಮ್ ಆರ್ಮಿ ಅಧ್ಯಕ್ಷ ಎ.ಎಸ್.ಯಲ್ಲಪ್ಪ ಮಾತನಾಡಿ, ಜನರು ಸಲ್ಲಿಸುವ ಪ್ರತಿ ಅರ್ಜಿಗೂ ಶುಲ್ಕದ ಪಟ್ಟಿಯನ್ನು ಕಚೇರಿಯಲ್ಲಿ ಅಳವಡಿಸಬೇಕು. ನಾಡ ಕಾರ್ಯಾಲಯದಲ್ಲಿ ಸರ್ಕಾರ ನಿಗಧಿ ಪಡಿಸಿದ ಧರಪಟ್ಟಿ ಹಾಕಿ ಆದಷ್ಟು ಬೇಗ ಹೆಚ್ಚುವರಿ ಡಾಟಾ ಎಂಟ್ರಿ ಆಪರೇಟರ್ ಅನ್ನು ನಿಯೋಜಿಸಬೇಕೆಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಪ್ರಮುಖರಾದ ಸಿಕ್ಲಿ ಬಸವರಾಜ, ಆರ್.ಎಂ.ಎಚ್.ಧನುಷ್, ಮೆಟ್ರಿ ಬಸವರಾಜ, ಎಚ್.ಹುಲಿಗೇಶ್, ಪ್ರವೀಣ, ಶಿವಕುಮಾರ್, ಬಸಮ್ಮ ಇತರಿದ್ದರು.

## ಕಂಪ್ಲಿಯಲ್ಲಿ ಮಳೆಗಾಗಿ ಪ್ರಾರ್ಥಿಸಿ ಪರ್ಜನ್ಯ ಹೋಮ ಹಾಗೂ ಅಧ್ಯಾತ್ಮಿಕ ಪ್ರವಚನ

**ನೈಜ್ಯ ದೆಸೆ ನ್ಯೂಸ್**



**ಬಳ್ಳಾರಿ / ಕಂಪ್ಲಿ: ಮುಂಗಾರು ಪೂರ್ವ ಮತ್ತು ಮುಂಗಾರು ಮಳೆಗಳು ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಕಂಪ್ಲಿ ಪಟ್ಟಣದ ಗೆಳೆಯರ ಬಳಗವು ಕಂಪ್ಲಿ ಕೋಟೆಯ ಶ್ರೀ ಹೊಳೆ ಆಂಜಿನೇಯ ದೇವಸ್ಥಾನದ ಆವರಣದಲ್ಲಿ ಮಳೆಗಾಗಿ ಪ್ರಾರ್ಥಿಸಿ ಪರ್ಜನ್ಯ ಹೋಮ, ಪೂರ್ಣಾಹುತಿ ಮತ್ತು ಅಧ್ಯಾತ್ಮಿಕ ಪ್ರವಚನ ಕಾರ್ಯಕ್ರಮವನ್ನು ಶ್ರದ್ಧೆ,ಭಕ್ತಿ,ಸಡಗರ ಸಂಭ್ರಮಗಳಿಂದ ನೆರವೇರಿಸಿದರು.**

ಕಂಪ್ಲಿ-ಕೋಟೆಯ ಶ್ರೀ ಹೊಳೆ ಆಂಜಿನೇಯ ದೇವಸ್ಥಾನದ ಆವರಣದಲ್ಲಿ ಗ್ರಾಮ ಪುರೋಹಿತರಾದ ಜೆ.ನಾಗರಾಜಾಚಾರ್ ಮತ್ತು ಸಂಗಡಿಗರಿಂದ ವರ್ಷವೃಷ್ಟಿಗಾಗಿ,ವರ್ಣಪ್ರತ್ಯರ್ಥ ಆದಿತ್ಯಾದಿ,ಬ್ರಹ್ಮಾದಿ ಮಂಡಲ ಪರ್ಜನ್ಯ ಹೋಮ ಮತ್ತು ಪೂರ್ಣಾಹುತಿ ಕಾರ್ಯಕ್ರಮಗಳು ಜರುಗಿದವು.

ನಂತರ ಗಂಗಾವತಿಯ ವಿಜಯಧ್ವಜ ಮಠದ ಪಂಡಿತ್ ವಾಗೀಶಾಚಾರ್ಯ ಇವರಿಂದ ಮಹಾಭಾರತದಲ್ಲಿ ನಡೆದ ವಿರಾಟ ಪರ್ವ ಅಧ್ಯಾತ್ಮಿಕ ಪ್ರವಚ ಕಾರ್ಯಕ್ರಮ ಜರುಗಿತು. ನಂತರ ಆಗಮಿಸಿದ್ದ ಸಕಲ ಸದ್ಭಕ್ತರು ಮಳೆಗಾಗಿ ಪ್ರಾರ್ಥಿಸಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.ಕೊನೆಯಲ್ಲಿ ನರೆದಿದ್ದ ಸಕಲ ಸದ್ಭಕ್ತರಿಗೂ ತೀರ್ಥ, ಪ್ರಸಾದ ವಿತರಣೆ ಜರುಗಿತು.ಕಾರ್ಯಕ್ರಮದಲ್ಲಿ ಕಂಪ್ಲಿ ಮತ್ತು ಕೋಟೆಯ ರೈತರು, ಸಾರ್ವಜನಿಕರು ಭಾಗವಹಿಸಿದ್ದರು.

## ನೆಟ್‌ವರ್ಕ್ ಸಮಸ್ಯೆ: ಎಸ್‌ಐಆರ್ ದಾಖಲಿಸಲು ಬೆಟ್ಟ ಏರಿದ ಬಿಎಲ್‌ಒ

**ನೈಜ್ಯ ದೆಸೆ ನ್ಯೂಸ್**



**ಲಿಂಗಸುಗೂರು: ಗ್ರಾಮೀಣ ಪ್ರದೇಶಗಳಲ್ಲಿ ಮೊಬೈಲ್ ನೆಟ್‌ವರ್ಕ್ ಸಮಸ್ಯೆ ಮುಂದುವರಿದಿರುವ ಹಿನ್ನೆಲೆಯಲ್ಲಿ ಎಸ್‌ಐಆರ್ ದಾಖಲಿಸಲು ನಿಯೋಜನೆಗೊಂಡಿದ್ದ ಸಿಬ್ಬಂದಿ ಬೆಟ್ಟ ಏರಿ ಮಾಹಿತಿ ಅಪ್‌ಲೋಡ್ ಮಾಡಿದ ಘಟನೆ ಲಿಂಗಸುಗೂರು ತಾಲೂಕಿನ ಗೋಲ್‌ಪಲ್ಲಿ ಗ್ರಾಮ ವ್ಯಾಪ್ತಿಯಲ್ಲಿ ನಡೆದಿದೆ.**

ಸೂಗೂರ ದೊಡ್ಡಿಯಲ್ಲಿ ಮನೆ ಮನೆಗೆ ತೆರಳಿ ಎಸ್‌ಐಆರ್ ದಾಖಲಿಸುವ ಕಾರ್ಯದಲ್ಲಿ ನಿರತರಾಗಿದ್ದ ಸಿಬ್ಬಂದಿ ದೇವಮ್ಮ ಹಾಗೂ ರಾಧಾ ಗೌಡಪ್ಪ ಅವರಿಗೆ ಮೊಬೈಲ್ ಆ?ಯಪ್‌ನಲ್ಲಿ ಮಾಹಿತಿ ದಾಖಲಿಸಿ ಅಪ್‌ಲೋಡ್ ಮಾಡಲು ನೆಟ್‌ವರ್ಕ್ ಸಮಸ್ಯೆ ಎದುರಾಗಿದೆ. ಗ್ರಾಮದ ಸುತ್ತಮುತ್ತ ಮೊಬೈಲ್ ಸಂಪರ್ಕ ಲಭ್ಯವಾಗದ ಹಿನ್ನೆಲೆಯಲ್ಲಿ ಹಲವು ಬಾರಿ ಪ್ರಯತ್ನಿಸಿದರೂ ಮಾಹಿತಿ ಅಪ್‌ಲೋಡ್ ಮಾಡಲು ಸಾಧ್ಯವಾಗಿಲ್ಲ. ಕೊನೆಗೆ ಗ್ರಾಮದ ಸಮೀಪದ ಬೆಟ್ಟ ಏರಿ ನೆಟ್‌ವರ್ಕ್ ಸಂಪರ್ಕ ಪಡೆದು ಎಸ್‌ಐಆರ್ ಮಾಹಿತಿಯನ್ನು ದಾಖಲಿಸಿದ್ದಾರೆ.

"ಆನ್‌ಲೈನ್ ವ್ಯವಸ್ಥೆ ಜಾರಿಗೆ ತಂದರೂ ಸಮರ್ಪಕ ನೆಟ್‌ವರ್ಕ್ ವ್ಯವಸ್ಥೆ ಇಲ್ಲ. ನೆಟ್‌ವರ್ಕ್‌ಗಾಗಿ ಬೆಟ್ಟ ಹತ್ತಬೇಕಾದ ಪರಿಸ್ಥಿತಿ ಬಂದಿದೆ" ಎಂದು ಸಿಬ್ಬಂದಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಸರ್ಕಾರ ಡಿಜಿಟಲ್ ಇಂಡಿಯಾ ಎಂದು ಹೇಳುತ್ತಿದೆ. ಆದರೆ ನಮ್ಮ ಗ್ರಾಮದಲ್ಲಿ ಒಂದು ದಾಖಲೆ ಮಾಡಲು ಸಹ ನೆಟ್‌ವರ್ಕ್ ಹುಡುಕಿಕೊಂಡು ಬೆಟ್ಟ ಹತ್ತಬೇಕಾಗಿದೆ. ತಕ್ಷಣ ಮೊಬೈಲ್ ಟವರ್ ಅಥವಾ ಉತ್ತಮ ಸಂಪರ್ಕ ವ್ಯವಸೆ ಕಲ್ಪಿಸಬೇಕು" ಎಂದು ಗ್ರಾಮಸ್ಥರು ಆಗ್ರಹಿಸಿದಾರೆ.

# ಬಳಗಾನೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಭರ್ಜರಿ ಕಾರ್ಯಾಚರಣೆ 20.074 ಕೆ.ಜಿ. ಗಾಂಜಾ ಜಪ್ತಿ, ಇಬ್ಬರು ಆರೋಪಿಗಳ ಬಂಧನ

**ನೈಜ್ಯ ದೆಸೆ ನ್ಯೂಸ್**



**ರಾಯಚೂರು ಜಿಲ್ಲೆಯಾದ್ಯಂತ ಗಾಂಜಾ ಸೇವನೆ ಹಾಗೂ ಅಕ್ರಮ ಸಾಗಾಣಿಕೆ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಗಾಂಜಾ ಪೆಡ್ಲರ್‌ಗಳನ್ನು ಪತ್ತೆಹಚ್ಚಿ ಅವರ ವಿರುದ್ಧ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳುವಂತೆ ಮಾನ್ಯ ಪೊಲೀಸ್ ಅಧೀಕ್ಷಕರು, ರಾಯಚೂರು ಅವರು ನೀಡಿದ ನಿರ್ದೇಶನದಂತೆ ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳಲ್ಲಿ ವಿಶೇಷ ಕಾರ್ಯಾಚರಣೆಗಳನ್ನು ಹಮ್ಮಿಕೊಳ್ಳಲಾಗಿದೆ.**

ಅದರಂತೆ ಶ್ರೀ ಅರುಣಾಂಗ್ಶು ಗಿರಿ, ಐಪಿಎಸ್, ಪೊಲೀಸ್ ಅಧೀಕ್ಷಕರು, ರಾಯಚೂರು ಅವರ ನೇತೃತ್ವದಲ್ಲಿ, ಶ್ರೀ ಹರೀಶ್ ಜಿ., ಹೆಚ್ಚುವರಿ ಪೊಲೀಸ್ ಅಧೀಕ್ಷಕರು, ರಾಯಚೂರು, ಶ್ರೀ ಚಂದ್ರಶೇಖರ ಜಿ., ಡಿವೈಎಸ್‌ಪಿ, ಸಿಂಧನೂರು ಉಪವಿಭಾಗ, ಶ್ರೀ ವಿನಾಯಕ್, ಸಿಪಿಐ, ಸಿಂಧನೂರು ಗ್ರಾಮೀಣ ವೃತ್ತ ಹಾಗೂ ಶ್ರೀ ವೀರಾರೆಡ್ಡಿ, ಪೊಲೀಸ್ ಇನ್ಸ್‌ಪೆಕ್ಟರ್, ಸಿಂಧನೂರು ನಗರ ಪೊಲೀಸ್ ಠಾಣೆ ಇವರ ಮಾರ್ಗದರ್ಶನದಲ್ಲಿ ಬಳಗಾನೂರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ವಿಶೇಷ ಕಾರ್ಯಾಚರಣೆ ನಡೆಸಲಾಯಿತು. ಕಾರ್ಯಾಚರಣೆಯ ವೇಳೆ ಗಾಂಜಾ ಅಕ್ರಮ ಸಾಗಾಣಿಕೆಯಲ್ಲಿ ತೊಡಗಿದ್ದ ಇಬ್ಬರು ಆರೋಪಿತರನ್ನು ಬಂಧಿಸಿ, ಅವರಿಂದ 20.074 ಕೆ.ಜಿ. ಗಾಂಜಾ (ಅಂದಾಜು ಮೌಲ್ಯ ?20,07,400/-) ಹಾಗೂ ಒಂದು ಮೋಟಾರ್ ಸೈಕಲ್ ಅನ್ನು ಜಪ್ತಿ ಮಾಡಲಾಗಿದೆ. ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿ, ನ್ಯಾಯಾಲಯಕ್ಕೆ ಹಾಜರುಪಡಿಸಿದ ನಂತರ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಈ ಯಶಸ್ವಿ ಕಾರ್ಯಾಚರಣೆಯನ್ನು ಏರಿಯಪ್ಪ, ಪಿಎಸ್‌ಐ (ಕಾನೂನು ಮತ್ತು ಸುವ್ಯವಸ್ಥೆ), ಬಳಗಾನೂರು ಪೊಲೀಸ್ ಠಾಣೆ ಅವರು ಮುನ್ನಡೆಸಿದರು. ಅವರಿಗೆ ಶ್ರೀ ಮೌನೇಶ್ ಯು. ರಾಠೋಡ್, ಪಿಎಸ್‌ಐ, ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆ, ಶ್ರೀಮತಿ ಸುಜಾತ, ಪಿಎಸ್‌ಐ, ತುರುವಿಹಾಳ ಪೊಲೀಸ್ ಠಾಣೆ ಹಾಗೂ ಸಿಬ್ಬಂದಿಗಳಾದ ಸಿದ್ದಪ್ಪ (ಎಎಸ್‌ಐ), ರವಿ (ಎಚ್‌ಸಿ), ದೇವಪ್ಪ (ಎಚ್‌ಸಿ), ವೆಂಕಟೇಶ್ (ಎಚ್‌ಸಿ), ರೇವಣಸಿದ್ದಪ್ಪ (ಎಚ್‌ಸಿ), ಸಂಗಯ್ಯ (ಎಚ್‌ಸಿ), ರಮೇಶ್ (ಪಿಸಿ), ನಾಗರಾಜ (ಪಿಸಿ), ಗೋಪಾಲ್ (ಪಿಸಿ), ರಾಮಪ್ಪ (ಪಿಸಿ), ಪ್ರಕಾಶ್ (ಪಿಸಿ) ಹಾಗೂ ಮಲ್ಲನಗೌಡ (ಎಪಿಸಿ?ಸಿಡಿಆರ್ ವಿಭಾಗ) ಅವರು ಸಹಕರಿಸಿದರು.

ರಾಯಚೂರು ಜಿಲ್ಲಾ ಪೊಲೀಸ್ ಇಲಾಖೆ ಸಾರ್ವಜನಿಕರಲ್ಲಿ ಮಾದಕ ವಸ್ತುಗಳ ಸೇವನೆ, ಮಾರಾಟ ಮತ್ತು ಸಾಗಾಣಿಕೆ ಕುರಿತು ಯಾವುದೇ ಮಾಹಿತಿ ದೊರೆತಲ್ಲಿ ತಕ್ಷಣ ಸಮೀಪದ ಪೊಲೀಸ್ ಠಾಣೆಗೆ ಅಥವಾ ಜಿಲ್ಲಾ ಪೊಲೀಸ್ ನಿಯಂತ್ರಣ ಕೊಠಡಿಗೆ ಮಾಹಿತಿ ನೀಡುವಂತೆ ಮನವಿ ಮಾಡಿದೆ. ಮಾಹಿತಿದಾರರ ವಿವರಗಳನ್ನು ಸಂಪೂರ್ಣ ಗೌಪ್ಯವಾಗಿರಿಸಲಾಗುವುದು ಎಂದು ಪೊಲೀಸ್ ಇಲಾಖೆ ತಿಳಿಸಿದೆ.

## ಸಾಹಿತ್ಯ ಸಿಂಚನ

### ಶಿಕ್ಷಣ

ಶಿಕ್ಷಣವೆಂಬುದು ಜ್ಞಾನದ ಬೆಳಕು,
ಬಾಳಿಗೆ ಅದು ಅಮೂಲ್ಯ ಸಂಪತ್ತು.
ಅಜ್ಞಾನದ ಕತ್ತಲನ್ನು ದೂರ ಮಾಡುವ,
ಆಶೆಯ ದೀಪವನ್ನು ಬೆಳಗಿಸುವ.

ಪುಸ್ತಕಗಳು ನಮ್ಮ ಗೆಳೆಯರು,
ಗುರುಗಳು ನಮ್ಮ ಮಾರ್ಗದರ್ಶಕರು.
ಕಲಿತ ಜ್ಞಾನ ಜೀವನದ ಬಲ,
ಯಶಸ್ಸಿನ ದಾರಿಗೆ ಅದೇ ಫಲ.

ಶಿಕ್ಷಣದಿಂದ ಬೆಳೆಯುತ್ತದೆ ವ್ಯಕ್ತಿತ್ವ,
ಹೆಚ್ಚಾಗುತ್ತದೆ ಆತ್ಮವಿಶ್ವಾಸ.
ಒಳ್ಳೆಯ ಗುಣಗಳನ್ನು ಬೆಳೆಸುವುದು,
ಸಮಾಜದಲ್ಲಿ ಗೌರವ ತರುವುದು.

ಶ್ರಮ ಮತ್ತು ಕಲಿಕೆ ಜೊತೆಯಾದರೆ,
ಯಶಸ್ಸು ನಮ್ಮದಾಗುವುದು ಖಂಡಿತ.
ಕಲಿತದ್ದನ್ನು ಹಂಚಿದಷ್ಟೂ,
ಜ್ಞಾನದ ಬೆಳಕು ಹೆಚ್ಚುತ್ತಲೇ ಇರುವುದು.

ಶಿಕ್ಷಣವೇ ದೇಶದ ಶಕ್ತಿ,
ಭವಿಷ್ಯದ ಕನಸುಗಳ ಭಕ್ತಿ.
ಓದಿ ಬೆಳೆದು ಸಾಧನೆ ಮಾಡೋಣ,
ಉತ್ತಮ ನಾಗರಿಕರಾಗಿ ದೇಶ ಕಟ್ಟೋಣ.

–ಕವಿತಾ ಹಿರೇಮಠ

## ಜುಲೈ 10ರಂದು ಜೆಸ್ಕಾಂನಿಂದ ವಿದ್ಯುತ್ ವ್ಯತ್ಯಯ

ನೈಜ್ಯ ದೆಸೆ ನ್ಯೂಸ್

ರಾಯಚೂರು ಜುಲೈ 09 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ವ್ಯಾಪ್ತಿಗೆ ಬರುವ 11 ಕೆವಿ ಮಾರ್ಗ ಲೈನ್ ಶಿಫ್ಟ್ ಕಾಮಗಾರಿನಿರ್ವಹಿಸುತ್ತಿರುವ ಪ್ರಯುಕ್ತ ಜುಲೈ 10ರ ಬೆಳಿಗ್ಗೆ 10ರಿಂದ ಸಂಜೆ 4ರವರೆಗೆ ವಿದ್ಯುತ್




ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ. ನಿಜಲಿಂಗಪ್ಪ ಕಾಲೋನಿ, ರಾಣಾ ಪ್ರತಾಪ್ ಕಾಲೋನಿ, ವೆಂಕಟೇಶ್ವರ ಕಾಲೋನಿ, ಬೆಲ್ಲಂ ಕಾಲೋನಿ, ಕುಲಸುಂಬಿ ಕಾಲೋನಿ, ಡಿ.ಸಿ ಗೆಸ್ಟ ಹೌಸ್, ಮಹಾಲಕ್ಷ್ಮಿ ಲೇಔಟ್, ದೇವರ ಕಾಲೋನಿ, ಚುಕ್ಕಿ ಕಾಲೋನಿ,ಎ.ಟಿ.ಎಮ್ ಸರ್ಕಲ್, ಹೋಸುರು, ರಾಂಪೂರ, ಸ್ಟೇಷನ್‌ಏರಿಯಾ, ಗುಡ್‌ಶೆಡ್‌ಏರಿಯಾ, ಆಶಾಪೂರು ಸರ್ಕಲ್, ಕೆ.ಕೆ ರೆಡ್ಡಿ ಫಂಕ್ಷನ್ ಹಾಲ್ ಹತ್ತಿರ, ಎಫ್.ಸಿ.ಐ ಗೋಡಾನ್, ಅಮರೇಶ್ವರ ಕಾಲೋನಿ, ಆರ್.ಆರ್ ಕಾಲೋನಿ, ಪದ್ಮಾವತಿ ಕಾಲೋನಿ, ರಾಜಮಾತಗುಡಿ, ಆಫಿಸರ್ಸ್ ಕಾಲೋನಿ, ಇಂಜಿನೀರ?ಸ್ ಕಾಲೋನಿ, ಪವನ್ ಲೇಔಟ್, ರಾಯಲ್ ಫೋರ್ಟ್, ಬಿ.ಸಿ.ಎಮ್ ಹಾಸ್ಟಲ್, ರಾಧಕೃಷ್ಣ ಫಂಕ್ಷನ್ ಹಾಲ್ ಸೇ–ರಿದಂತೆ ಸುತ್ತಮುತ್ತಲಿನ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532–226386, 08532–231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಮಳೆರಾಯನ ಆಗಮನಕ್ಕಾಗಿ ಬ್ಯಾಗವಾಟ ಗ್ರಾಮದಲ್ಲಿ 24 ಗಂಟೆಗಳ ಅಖಂಡ ಸಪ್ತ ಭಜನೆ ಹಾಗೂ ನಿರಂತರ ದಾಸೋಹ

ನೈಜ್ಯ ದೆಸೆ ನ್ಯೂಸ್

**ಬ್ಯಾಗವಾಟ, ಜುಲೈ 9: ರಾಜ್ಯದಲ್ಲಿ ಉತ್ತಮ ಮಳೆಯಾಗಿ ರೈತರ ಬದುಕು ಹಸನಾಗಲಿ, ಜಲಾಶಯಗಳು ತುಂಬಿ ನಾಡಿನಲ್ಲಿ ಸುಭಿಕ್ಷತೆ ನೆಲೆಸಲಿ ಎಂಬ ಮಹೋನ್ನತ ಸಂಕಲ್ಪದೊಂದಿಗೆ ರಾಯಚೂರು ಜಿಲ್ಲೆಯ ಬ್ಯಾಗವಾಟ ಗ್ರಾಮದ ಶ್ರೀ ಆಂಜನೇಯ ದೇವಸ್ಥಾನದಲ್ಲಿ ಜು 08 ರಂದು ಸಂಜೆ 5:09 ಗಂಟೆಯಿಂದ ಜು 09 ರಂದು ಸಂಜೆ 5:09 ಗಂಟೆಯವರೆಗೆ ಅಖಂಡ ಸಪ್ತ ಭಜನೆ, ವಿಶೇಷ ಪೂಜೆ ಹಾಗೂ ನಿರಂತರ ದಾಸೋಹ ಕಾರ್ಯಕ್ರಮವನ್ನು ಅತ್ಯಂತ ಭಕ್ತಿಭಾವದಿಂದ ಆಯೋಜಿಸಲಾಯಿತು.**

ಕಾರ್ಯಕ್ರಮದ ಅಂಗವಾಗಿ ಬ್ಯಾಗವಾಟ ಗ್ರಾಮದ ಎಲ್ಲಾ ದೇವಸ್ಥಾನಗಳಿಗೆ ತುಂಬಿದ ಕೊಡಗಳಲ್ಲಿ ನೀರು ಅರ್ಪಿಸುವ ವಿಶೇಷ ಧಾರ್ಮಿಕ ಆಚರಣೆಯನ್ನು ನೆರವೇ–ರಿಸಲಾಯಿತು. ಈ ಸಂಪ್ರದಾಯದ ಮೂಲಕ ಮಳೆರಾಯನ ಕೃಪೆಗಾಗಿ ಭಕ್ತರು ಸಾಮೂಹಿಕವಾಗಿ ಪ್ರಾರ್ಥನೆ ಸಲ್ಲಿಸಿದರು. 24 ಗಂಟೆಗಳ ಕಾಲ ನಿರಂತರವಾಗಿ ಭಜನೆ,



ನಾಮಸಂಕೀರ್ತನೆ, ದೇವರ ಸ್ತುತಿ ಹಾಗೂ ವಿಶೇಷ ಪೂಜಾ ಕಾರ್ಯಕ್ರಮಗಳು ನಡೆದವು.

ದೇವಸ್ಥಾನದ ಆವರಣದಲ್ಲಿ ಭಕ್ತಿಯ ವಾತಾವರಣ ನೆಲೆಸಿದ್ದು, ಮಹಿಳೆಯರು, ಯುವಕರು, ಹಿರಿಯರು ಹಾಗೂ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮಕ್ಕೆ ಮೆರುಗು ತಂದರು. ಕಾರ್ಯಕ್ರಮದಲ್ಲಿ ಬ್ಯಾಗವಾಟ ಗ್ರಾಮದಷ್ಟೇ ಅಲ್ಲದೆ ಸುತ್ತಮುತ್ತಲಿನ ಅನೇಕ ಗ್ರಾಮಗಳಿಂದ ಭಕ್ತರು ಆಗಮಿಸಿ, ಉತ್ತಮ ಮಳೆಯಾಗಿ ರೈತರ ಬೆಳೆ ಸಮೃದ್ಧಿಯಾಗಲಿ, ಕುಡಿಯುವ ನೀರಿನ ಸಮಸ್ಯೆ ನಿವಾರಣೆಯಾಗಲಿ ಹಾಗೂ ರಾಜ್ಯದಲ್ಲಿ ಸುಖ, ಶಾಂತಿ ಮತ್ತು ಸಮೃದ್ಧಿ ನೆಲೆಸಲಿ ಎಂದು ದೇವರಲ್ಲಿ ಪ್ರಾರ್ಥಿಸಿದರು. ಭಕ್ತರ ಅನುಕೂಲಕ್ಕಾಗಿ ಕಾರ್ಯಕ್ರಮದ ಸಂಪೂರ್ಣ ಅವಧಿಯಲ್ಲಿ 24 ಗಂಟೆಗಳ ನಿರಂತರ ದಾಸೋಹ ವ್ಯವಸ್ಥೆ ಮಾಡಲಾಗಿ–ತ್ತು. ಆಗಮಿಸಿದ ಎಲ್ಲ ಭಕ್ತರಿಗೆ ಅನ್ನಪ್ರಸಾದ,


ಕುಡಿಯುವ ನೀರು ಹಾಗೂ ಅಗತ್ಯ ಸೌಲಭ್ಯಗಳನ್ನು ಯಾವುದೇ ವ್ಯತ್ಯಯವಿಲ್ಲದೆ ಸೇವಾಭಾವದಿಂದ ಒದಗಿಸಲಾಯಿತು. ದಾಸೋಹ ಸೇವೆಯಲ್ಲಿ ಗ್ರಾಮಸ್ಥರು, ಯುವಕರು ಹಾಗೂ ಸ್ವಯಂಸೇವಕರು ಸಮರ್ಪಿತವಾಗಿ ಪಾಲ್ಗೊಂಡರು. ಗ್ರಾಮದ ಮುಖಂಡರು, ದೇವಸ್ಥಾನದ ಆಡಳಿತ ಮಂಡಳಿ, ಹಿರಿಯರು, ಯುವಕರು, ಮಹಿಳೆಯರು ಹಾಗೂ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಕಾರ್ಯಕ್ರಮದ ಯಶಸ್ಸಿಗೆ ಶ್ರಮವಹಿಸಿದರು. ಅವರ ಸಂಘಟಿತ ಪ್ರಯತ್ನದಿಂದ ಕಾರ್ಯಕ್ರಮವು ಶಾಂತಿಯುತವಾಗಿ, ಅಚ್ಚುಕಟ್ಟಾಗಿ ಮತ್ತು ಅತ್ಯಂತ ಯಶಸ್ವಿಯಾಗಿ ನೆರವೇರಿತು. ಈ ಧಾರ್ಮಿಕ ಕಾರ್ಯಕ್ರಮವು ಭಕ್ತಿ, ಸೇವೆ, ಸಾಮರಸ್ಯ ಮತ್ತು ಗ್ರಾಮೀಣ ಐಕ್ಯತೆಯ ಪ್ರತೀಕವಾಗಿ ಮೂಡಿಬಂದಿದ್ದು, ಮಳೆರಾಯನ ಕೃಪೆಗಾಗಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸುವ ಮೂಲಕ ಸಮಾಜಕ್ಕೆ ಉತ್ತಮ ಸಂದೇಶವನ್ನು ನೀಡಿತು.

## ಸಿಂಧನೂರಿನ ಕಾರುಣ್ಯಾಶ್ರಮದ ಸೇವೆ ಪುಣ್ಯದ ಕಾರ್ಯ – ಷ. ಬ್ರ. ಅಭಿನವ ಕರಿಬಸವ ಶಿವಾಚಾರ್ಯ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು:ಕುಷ್ಟಗಿ ತಾಲೂಕಿನ ನಿಡಶೇಸಿ ಶ್ರೀ ಚನ್ನಬಸವೇಶ್ವರ ಶ್ರೀಮಠದ ಪೀಠಾಧಿಪತಿಗಳಾದ ಶ್ರೀ ಷ. ಬ್ರ. ಅಭಿನವ ಕರಿಬಸವ ಶಿವಾಚಾರ್ಯ ಮಹಾಸ್ವಾಮಿಗಳು ಸಿಂಧನೂರು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆ ಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮಕ್ಕೆ ಪಾದಸ್ಪರ್ಶ ಮಾಡಿ ಆಶ್ರಮದ ಎಲ್ಲಾ ಕೊಠಡಿಗಳನ್ನು ವೀಕ್ಷಿಸಿ ಆಶ್ರಮದ ಆಶ್ರಯದಾತರುಗಳಿಗೆ ಹಣ್ಣು ಹಂಪಲುಗಳನ್ನು ವಿತರಿಸಿ ಆತ್ಮಸ್ಥೈರ್ಯ ತುಂಬಿ ಆಶೀರ್ವದಿಸಿದರು.**

ಈ ಸಮಯದಲ್ಲಿ ಆಶ್ರಮದ ವತಿಯಿಂದ ಆಶ್ರಮದ ಸೇವಾಕರ್ತ ದಂಪತಿಗಳಾದ ಸುಜಾತ ಡಾಕ್ಟರ್ ಚನ್ನಬಸವ ಸ್ವಾಮಿ ಹಿರೇಮಠ ದಂಪತಿಗಳು ಶ್ರೀಗಳಿಗೆ ವಿಶೇಷ ಪಾದಪೂಜೆ ಸಲ್ಲಿಸಿದರು. ನಂತರ



ಷ. ಬ್ರ. ಅಭಿನವ ಕರಿಬಸವ ಶಿವಾಚಾರ್ಯ ಮಹಾಸ್ವಾಮಿಗಳು ಕಾರುಣ್ಯಾಶ್ರಮದ ಸೇವೆ ಪುಣ್ಯದ ಕಾರ್ಯ ಇಂತಹ ಸೇವಾ ಕಾರ್ಯಗಳಿಗೆ ನಮ್ಮ ಶ್ರೀಮಠದ ಹಾಗೂ ನಾಡಿನ ಹರ ಗುರು ಚರಮೂರ್ತಿಗಳ ಶುಭಾ ಆಶೀರ್ವಾದ ಸದಾವಕಾಲವಿರುತ್ತದೆ. ನಮ್ಮ ಕಲ್ಯಾಣ ಕರ್ನಾಟಕದ ಸಮಾಜ ಸೇವೆಯ ಮಾದರಿ ಸಂಸ್ಥೆಯಾಗಿ ಮಾಡುತ್ತಿರುವ ಈ ಕಾರ್ಯ ವಿಶೇಷ ತಪಸ್ಸಾಗಿದೆ. ಕಾರುಣ್ಯ ಎನ್ನುವ ಪದಕ್ಕೆ ಸಂಪೂರ್ಣ ಅರ್ಥ ಕಲ್ಪಿಸಿಕೊಟ್ಟು ನಾಡಿನ ಎಲ್ಲಾ ಕಾರುಣ್ಯ ಮೂರ್ತಿಗಳ ಆಶಯದಂತೆ ಈ ಸಂಸ್ಥೆ ಸಮಾಜಕ್ಕೆ ಅರ್ಪಣೆಯಾಗಿ ಸಿಂಧನೂ–ರಿನ ಘನತೆ ಗೌರವವನ್ನು ಹೆಚ್ಚಿಸಿದೆ ಎಂದು ಆಶೀರ್ವಚನ ನೀಡಿ ಸಂಸ್ಥೆಯ ಪದಾಧಿಕಾರಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಅಮರೇಶ ಸ್ವಾಮಿ ಹಿರೇಮಠ ಬದಾಮಿ ಇವರನ್ನು ಆಶ್ರಮದ ವತಿಯಿಂದ ಗೌರವಿಸಲಾಯಿತು. ಈ ಸಮಯದಲ್ಲಿ ವೇದಮೂರ್ತಿ ವೀರೇಶ ಯಡಿಯೂರು ಮಠ ಶ್ರೀ ಶಾಂಭವಿ ಪುಣ್ಯಾಶ್ರಮ ಸಿಂಧನೂರು. ಮುದುಕಯ್ಯ ಸ್ವಾಮಿ ಯಡಿಯೂರು ಮಠ. ಶಿವಶರಣ ಸ್ವಾಮಿ. ಪ್ರಜ್ವಲ್ ಕುಮಾರ್ ಯಡಿಯೂರುಮಠ. ಹಾಗೂ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ. ಆಶ್ರಮದ ಸದಸ್ಯರಾದ ಸುಜಾತ ಹಿರೇಮಠ. ಸಿಬ್ಬಂದಿಗಳಾದ ಸುಜಾತಾ ಮಲದ ಗುಡ್ಡ. ಸಿದ್ದಯ್ಯ ಸ್ವಾಮಿ.ಮ–ರಿಯಪ್ಪ.ಜ್ಯೋತಿ. ಮತ್ತು ನಿಡಶೇಸಿ ಶ್ರೀಮಠದ ಸೇವಾಕರ್ತರುಗಳು ಉಪಸ್ಥಿತರಿದ್ದರು.

## ಮಾನ್ವಿ ಮೀಸಲು ಕ್ಷೇತ್ರದಲ್ಲಿ ಮೈತ್ರಿ ಅಭ್ಯರ್ಥಿ ನಾನೇ: ರಾಜಾ ವೆಂಕಟಪ್ಪ ನಾಯಕ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಮುಂಬರುವ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಮಾನ್ವಿ ಪರಿಶಿಷ್ಟ ಪಂಗಡ ಮೀಸಲು ಕ್ಷೇತ್ರದಿಂದ ಜೆಡಿಎಸ್?ಬಿಜೆಪಿ ಮೈತ್ರಿಯ ಅಭ್ಯರ್ಥಿಯಾಗಿ ತಾವೇ ಸ್ಪರ್ಧಿಸುವುದಾಗಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಘೋಷಿಸಿದರು.**

ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ಹಾಗೂ ಜೆಡಿ–ಎಸ್ ಹೈಕಮಾಂಡ್ ಮಟ್ಟದಲ್ಲಿ ಮೈತ್ರಿ ಅಭ್ಯರ್ಥಿ ಆಯ್ಕೆ ಕುರಿತು ಆಂತರಿಕ ಸೂಚನೆ ದೊರೆತಿದ್ದು, ಪಕ್ಷದ ಹಿರಿಯ ನಾಯಕರ ಮಾರ್ಗದರ್ಶನದಂತೆ ಕ್ಷೇತ್ರದಲ್ಲಿ ಪಕ್ಷ ಸಂಘಟನೆ ಹಾಗೂ ಜನಸಂಪರ್ಕ ಕಾರ್ಯಕ್ರಮಗಳನ್ನು ನಿರಂತರವಾಗಿ ನಡೆಸುತ್ತಿದ್ದೇವೆ ಎಂದು ತಿಳಿಸಿದರು. ವಿರೋಧ ಪಕ್ಷವಾಗಿ ಕ್ಷೇತ್ರದ ಜನರ ಸಮಸ್ಯೆಗಳನ್ನು



ಸರ್ಕಾರದ ಗಮನಕ್ಕೆ ತರುವ ಕೆಲಸವನ್ನು ನಿರಂತರವಾಗಿ ಮಾಡುತ್ತಿದ್ದೇವೆ. ಜನಪರ ಹೋರಾಟಗಳ ಮೂಲಕ ಜನರ ಧ್ವನಿಯಾಗಿ ಕಾರ್ಯನಿರ್ವಹಿಸುತ್ತಿದ್ದೇವೆ ಎಂದು ಹೇಳಿದರು.

2018ರ ವಿಧಾನಸಭೆ ಚುನಾವಣೆಯಲ್ಲಿ ಕ್ಷೇತ್ರದ ಮತದಾರರು ತಮ್ಮ ಮೇಲೆ ವಿಶ್ವಾಸವಿಟ್ಟು ಶಾಸಕನಾಗಿ ಆಯ್ಕೆ ಮಾಡಿದ್ದರು. ಶಾಸಕನಾಗಿದ್ದ ಅವಧಿಯಲ್ಲಿ ರಸ್ತೆ, ಕುಡಿಯುವ ನೀರು, ನೀರಾವರಿ ಸೇ–ರಿದಂತೆ ಹಲವು ಅಭಿವೃದ್ಧಿ ಕಾಮಗಾ–ರಿಗಳಿಗೆ ಆದ್ಯತೆ ನೀಡಿದ್ದೇನೆ. ರೈತರಿಗೆ ಎರಡು ಬೆಳೆಗಳಿಗೆ ನೀರು ಪೂರೈಸುವ ಉದ್ದೇಶದಿಂದ ವಿವಿಧ ನೀರಾವರಿ ಯೋಜನೆಗಳನ್ನು ಜಾ–ರಿಗೊಳಿಸಿದ್ದು, ಅಭಿವೃದ್ಧಿ ಕಾರ್ಯಗಳೇ ನನ್ನ ಬಲವಾಗಿದೆ ಎಂದು ಹೇಳಿದರು.

ತಮ್ಮ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿರುವ ಕ್ಷೇತ್ರದ ಜನರು ಮುಂಬರುವ ಚುನಾವಣೆಯಲ್ಲೂ ಬೆಂಬಲ ನೀಡಿ ಜೆಡಿ–ಎಸ್?ಬಿಜೆಪಿ ಮೈತ್ರಿ ಅಭ್ಯರ್ಥಿಯಾಗಿ ತಮ್ಮನ್ನು ಗೆಲ್ಲಿಸಲಿದ್ದಾರೆ ಎಂಬ ವಿಶ್ವಾಸವನ್ನು ಅವರು ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಜೆಡಿಎಸ್ ತಾಲೂಕು ಘಟಕದ ಅಧ್ಯಕ್ಷ ಈರಣ್ಣ ಮರ್ಲಟ್ಟಿ, ಸಿರವಾರ ತಾಲೂಕು ಅಧ್ಯಕ್ಷ ಟಿ.ಮಲ್ಲಿಕಾರ್ಜುನ ಗೌಡ ಬಲ್ಲಟಗಿ, ಬಾಷಾ ಸಾಬ್, ಪಿ. ರವಿಕುಮಾರ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ಆಯಾತಪ್ಪಿ ಅಪರಿಚಿತ ವ್ಯಕಿ ಮೃತ: ವಾರಸುದಾರರ ಪತ್ತೆಗೆ ರೈಲ್ವೇ ಪೊಲೀಸರ ಮನವಿ

ನೈಜ್ಯ ದೆಸೆ ನ್ಯೂಸ್

**ರಾಯಚೂರು ಜುಲೈ 09 (ಕರ್ನಾಟಕ ವಾರ್ತೆ): ರಾಯಚೂರು ರೈಲ್ವೇ ನಿಲ್ದಾಣದ ವೇದಿಕೆ ನಂ–01 ರಲ್ಲಿ ಮಂತ್ರಾಲಯ ಎಂಡ್ ಕಡೆಗೆ 12732 ಪದ್ಮಾವತಿ ಎಕ್ಸ್ಪ್ರೆಸ್ ರೈಲುಗಾಡಿ ಹತ್ತುವಾಗ ಮೃತ ಅಪರಿಚಿತ ವ್ಯಕ್ತಿಯು ಆಯಾತಪ್ಪಿ ಕೆಳಗೆ ಬಿದ್ದು ಆಕಸ್ಮಿಕವಾಗಿ ಮೃತಪಟ್ಟಿದ್ದು, ಈ ಕುರಿತು ರಾಯಚೂರು ರೈಲ್ವೇ ಪೊಲೀಸ್ ಠಾಣೆಯಲ್ಲಿ ಯು.ಡಿ.ಆರ್ ಸಂಖ್ಯೆ: 36/2026 ಕಲಂ 194 ಬಿ.ಎನ್.ಎಸ್.ಎಸ್ ರಿತ್ಯಾ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಳ್ಳಲಾಗಿದೆ.**



ಮೃತದೇಹ ದೊರೆತ ಘಟನಾ ಸ್ಥಳಗಳಲ್ಲಿ ಮೃತನ ವಾರಸುದಾರರು ಯಾರು ಪತ್ತೆಯಾಗಿರುವುದಿಲ್ಲ. ಆದ–್ದರಿಂದ ಮೃತನ ವಾರುಸುದಾರ ಪತ್ತೆ ಹಾಗೂ ಪಿ.ಎಂ.ಇ. ಸಲುವಾಗಿ ಮೃತದೇಹವನ್ನು ರಾಯಚೂರಿನ ರಿಮ್ಸ್ ಆಸ್ಪತ್ರೆಯ ಶೀತಲ ಶವಗಾರದಲ್ಲಿ ಇಡಲಾಗಿದೆ. ಮೃತ ಅಪರಿಚಿತ ವ್ಯಕಿಯ ಚಹರೆ: ಸುಮಾರು 30–35 ವರ್ಷ, ಎತ್ತರ ಸುಮಾರು 6 ಅಡಿ, ಸಾದಾಕಪ್ಪು ಮೈ ಬಣ್ಣ, ಉದ್ದ ಮುಖ, ಕಪ್ಪು ಗಡ್ಡ ಮತ್ತು ಕಪ್ಪು ಮೀಸೆ ಹೊಂದಿರುತ್ತಾನೆ. ತಲೆಯಲ್ಲಿ ಅರ್ಧ ಇಂಚು ಕಪ್ಪು ಕೂದಲು ಹೊಂದಿದ್ದು, ಒಂದು ಚ್ಯಾಕಲೇಟ್ ಮತ್ತು ಕಪ್ಪು ಬಣ್ಣದ ಪೂಲ್ ತೋಳಿನ ಶರ್ಟ, ಒಂದು ಚ್ಯಾಕಲೇಟ್ ಬಣ್ಣದ ಮಧ್ಯೆ ಬಿಳಿ ಬಣ್ಣದ ಒಂದು ಗೇರೆಯುಳ್ಳ ನೈಟ್ ಪ್ಯಾಂಟ್, ಎರಡು ಕಾಲಿನಲ್ಲಿ ಚಪ್ಪಲಿ ಧರಿಸಲಾಗಿದೆ ಈ ಮೃತನ ವಾರಸುದಾರರು ಪತ್ತೆಯಾದಲ್ಲಿ ಅಥ–ವಾ ಈ ಮೃತನ ಹೊಲಿಕೆಯ ಪುರುಷ ಕಾಣೆಯಾದ ಪ್ರಕರಣ ದಾಖಲಾಗಿದ್ದಲ್ಲಿ ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ: 08532–231716 ಅಥವಾ ಮೊಬೈಲ್ ಸಂಖ್ಯೆ: 9480802111 ಅಥವಾ ರೈಲ್ವೆ ಪೊಲೀಸ್ ಕಂಟ್ರೋಲ್ ರೂಂ: 080–22871291ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ರೈಲ್ವೇ ಪೊಲೀಸ್ ಠಾಣೆಯ ಪೊಲೀಸ್ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿಂಧನೂರಿನಲ್ಲಿ ರಾಷ್ಟ್ರೀಯ ಓರಲ್ ಹೆಲ್ತ್ ಹಾಗೂ ಹದಿಹರೆಯದವರ ಆರೋಗ್ಯ ಜಾಗೃತಿ ಶಿಬಿರ ಯಶಸ್ವಿ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ತಾಲೂಕು ಸಾರ್ವಜನಿಕ ಆಸ್ಪತ್ರೆ ಸಿಂಧನೂರು ಮತ್ತು ತಾಲೂಕ ಆರೋಗ್ಯ ಅಧಿಕಾ–ರಿಗಳ ಕಾರ್ಯಾಲಯ ಸಿಂಧನೂರು, ಹಾಗೂ ಸರಕಾರಿ ಪ್ರಥಮ ದರ್ಜೆ ಪದವಿ ಮಹಾವಿದ್ಯಾಲಯ ಸಿಂಧನೂರು ಇವರುಗಳ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ಓರಲ್ ಹೆಲ್ತ್ ಹಾಗೂ ದಂತ ಆರೋಗ್ಯ ಕಾರ್ಯಕ್ರಮದ ರಾಷ್ಟ್ರೀಯ ಕಿಶೋರ್ ಸ್ವಾಸ್ತ್ಯ ಕಾರ್ಯಕ್ರಮ ಹದಿಹರೆಯದವರ ಆರೋಗ್ಯ ಮತ್ತು ಕ್ಷೇಮ ದಿನಾಚರಣೆ ಕಾರ್ಯಕ್ರಮ ಮತ್ತು ಉಚಿತ ದಂತ ತಪಾಸಣೆ ಶಿಬಿರ ಹಾಗೂ ಆರೋಗ್ಯ ಶಿಕ್ಷಣ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.**

ಡಾಕ್ಟರ್ ನಾಗವೇಣಿ ದಂತ ವೈದ್ಯರು ಸಾರ್ವಜನಿಕ ಆಸ್ಪತ್ರೆ ಸಿಂಧನೂರ್ ಇವರು ವಿದ್ಯಾರ್ಥಿನಿಯನ್ನು ಉದ್ದೇಶಿಸಿ ದಂತ ಚಿಕಿತ್ಸೆಯು ಹಲ್ಲು ಮತ್ತು ವಸಡುಗಳ ಆರೋಗ್ಯವನ್ನು ಕಾಪಾಡಿಕೊಳ್ಳಲು ಅತ್ಯಗತ್ಯ ದಂತ ಚಿಕಿತ್ಸೆಯ ಪ್ರಮುಖ ವಿಧಾನಗಳು ಮತ್ತು ದಂತ ತುಂಬುವಿಕೆನಲ್ ಚಿಕಿತ್ಸೆ , ಅಲ್ಲಿನ ಕಿರೀಟಗಳು



ದಂತ ಹೊರ ತೆಗೆಯುವಿಕೆ ಹಲ್ಲುಗಳ ಕಾಳಜಿ ಮತ್ತು ಮುನ್ನೆಚ್ಚರಿಕೆ ಕ್ರಮಗಳ ಒಳಭಾಗದ ಶಂಕು ಅಥವಾ ನೋವಿನ ದಂತ ಭರ್ತಿ ಚಿಕಿತ್ಸೆ ವಿವರಗಳು ತಿಳಿಸಿದರು ಅಲ್ಲಿನ ಅಂದವನ್ನು ಹೆಚ್ಚಿಸಲು ಕಾಸ್ಮೆಟಿ–ಕ್ ದಂತ ಚಿಕಿತ್ಸೆ ಆಧುನಿಕ ವಿಧಾನಗಳು, ಹಲ್ಲುಗಳು ಕೊಳೆಯುವುದನ್ನು ತಡೆಯಲು ಮತ್ತು ವಸಡುಗಳ ರೋಗಗಳ ನಿಯಂತ್ರಿಸಲು ಮಿತವಾಗಿ ಚಿಕಿತ್ಸೆಯನ್ನು ಪಡೆಯಬೇಕು ಎಂದು ಹೇಳಿದರು ಹಲ್ಲಿನ ಸೋಂಕುಗಳ ಭಾಗದ ನರಗಳಿಗೆ ತಲುಪಿದಾಗ ಹಲ್ಲನ್ನು ಕಿತ್ತು ಹಾಕುವ ಬದಲು ಸಂಕಲ ವಿವರಿಸಿ ಹಲ್ಲನ್ನು ಉಳಿಸಿಕೊಳ್ಳಲು ಮಾಡುವ ಚಿಕಿತ್ಸೆ ಎಂದು ತಿಳಿಸಿದರು,ಈ ಕಾರ್ಯಕ್ರಮದಲ್ಲಿ ತಾಲೂಕ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು ಶ್ರೀಮತಿ ಗೀತಾ ಹಿರೇಮಠ ರವರು ವಿದ್ಯಾರ್ಥಿಗಳಿಗೆ ಮಾಸಿಕ ಋತುವು ಮಹಿಳೆಯರ ಒಂದು ಸ್ವಾಭಾವಿಕ ಪ್ರಕ್ರಿಯೆ, ಇದು ಜೀವದ ಉಸಿರಾಟದಷ್ಟೇ ಸಹಜ. ಮುಜುಗರ ಬೇಡ, ಶಿಕ್ಷಣ ಬೇಕು ಎಂದು ಹೇಳಿದರು.

ಋತುಚಕ್ರದ ಮೂಡ ನಂಬಿಕೆಗಳಿಗೆ ವಿದ್ಯಾರ್ಥಿಗಳು ತಾರ್ಕಿಕವಾಗಿ ಚಿಂತಿಸಿ ಪರಿಹಾರ ಪಡೆಯಬೇಕು. ಇಲ್ಲಿ ಆರೋಗ್ಯ ಶಿಕ್ಷಣ ದಿಂದ ಎಲ್ಲಾ ಸಮಸ್ಯೆಗಳ ನಿವಾರಣೆಗಳು ಸಾಧ್ಯ. ನಂತರ ಬಾಲ್ಯವಿವಾಹಾರ ಪರಿಣಾಮಗಳ ಬಗ್ಗೆ, ಮಹಿಳೆಯರ ಸಂತಾನೋತ್ಪತ್ತಿ ಆರೋಗ್ಯದ ಬಗ್ಗೆ ಜಾಗೃತಿ ಶಿಕ್ಷಣ ನೀಡಿದರು. ಹಾಗೂ ಜನಸಂಖ್ಯ ದಿನಾಚರಣೆ ನಿಮಿತ್ಯ ಜನಸಂಖ್ಯ ನಿಯಂತ್ರಣ ವಿಷಯದ ಬಗ್ಗೆ, ಹಾಗೂ ನಿಯಂತ್ರಣ ಮಾರ್ಗಗಳ ಬಗ್ಗೆ ಮಾಹಿತಿ ನೀಡಿದರು. ಇದೇ ಕಾರ್ಯಕ್ರಮದಲ್ಲಿ ಖಎಖಎ ಆಪ್ತ ಸಮಾಲೋಚಕರು ಶ್ರೀ ರಾಮಾಂಜನ ಕುಮಾರ್ ರವರು ಹದಿಹರೆಯ ಮಕ್ಕಳಿಗಾಗಿ ಇರುವಂತ ಸ್ನೇಹಾ ಕ್ಲಿನಿಕ್ ಕಾರ್ಯಕ್ರಮದ ಕುರಿತು ಅದರ ಸೇವಾ ಸೌಲಭ್ಯಗಳ ಕುರಿತು, ವಿದ್ಯಾರ್ಥಿಗಳ ಆರೋಗ್ಯ ಸಮಸ್ಯೆ ಗಳ ಋತುಚಕ್ರ ಗೊಂದಲಗಳಿಗೆ ಆಪ್ತ ಸಮಾಲೋಚನೆ ಮಾಡಿದರು. ಪ್ರೇರಣಾ– ಟಜಟಿ–ಣಡಿಣಚಿಟ ಅಣಾರಿ ವಿತರಿಸಲಾಯಿತು.

ಪೌಷ್ಟಿಕ ಆಹಾರ ಸೇವನೆ ಬಗ್ಗೆ, ವೈಯಕ್ತಿಕ ಶುಚಿತ್ವದ ಕುರಿತು ಮತ್ತು ಮಾನಸಿಕ ಆರೋಗ್ಯ ಸದೃಢತೆ ವಹಿಸಬೇಕು ಎಂದು ತಿಳಿಸಿದರು. ಡಾ. ವೈಜನಾಥ ಸಗರಮಠ್ ಉಪನ್ಯಾಸಕರು ಮಾತನಾಡಿ ಓರಲ್ ಹೆಲ್ತ್ ಬಗ್ಗೆ ಹೆಚ್ಚಿನ ಗಮನವನ್ನು ಕೊಡಬೇಕು ಆರೋಗ್ಯದ ಬಗ್ಗೆ ಕಾಳಸಿ ವಹಿಸಬೇಕು ವಯಕ್ತಿಕವಾಗಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಲ್ಲಿ ಮನವಿ ಮಾಡಿದರು. ನಂತರ ಪ್ರೊಫೆಸರ್ ಜಾಜಿ ದೇವೇಂದ್ರಪ್ಪ ಅವರು ಮಾತನಾಡಿ ಹೆಣ್ಣು ಮಕ್ಕಳಲ್ಲಿ ವೈಯಕ್ತಿಕ ಸ್ವಚ್ಛತೆ ತುಂಬಾ ಮುಖ್ಯವಾಗಿರುತ್ತದೆ ಋತುಬಂಧ ದಿನಗಳಲ್ಲಿ ಮತ್ತು ದೈಹಿಕ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು ಕ್ಯಾನ್ಸರ್ ಅಂತ ಮಾರತ ರೋಗಗಳನ್ನು ಹಾಗೂ ದಂತ ಚಿಕಿತ್ಸೆಯ ಕುರಿತು ಮಾಹಿತಿಯನ್ನು ವಿದ್ಯಾರ್ಥಿನಿಯರಿಗೆ ನೀಡಿದರು. ಈ ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರು, ದಂತ ವೈದ್ಯರು, ಡಾ. ಪುಷ್ಪ, ದಿವ್ಯ,ರೇಣುಕಾ, ಇರ್ಶಾತ್ ಬೇಗಂ, ಕೀರ್ತನ್ ಸಂಧ್ಯಾ ಲಕ್ಷ್ಮಿ ದೇವಿ ಇತ್ಯಾದಿ ಉಪನ್ಯಾಸಕರು ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

## ನೇಮಕಾತಿ ಪ್ರಕಟಣೆ

**NIT ಕರ್ನಾಟಕ ನೇಮಕಾತಿ 2026 1 ಪ್ರಾಜೆಕ್ಟ್ ಅಸೋಸಿಯೇಟ್ ಹುದ್ದೆಗೆ ಅರ್ಜಿ ಸಲ್ಲಿಸಿ ಜುಲೈ 8, 2026**

NIT ಕರ್ನಾಟಕ ನೇಮಕಾತಿ 2026: 1 ಪ್ರಾಜೆಕ್ಟ್ ಅಸೋಸಿಯೇಟ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ರಾಷ್ಟ್ರೀಯ ತಂತ್ರಜ್ಞಾನ ಸಂಸ್ಥೆ ಕರ್ನಾಟಕ ಸುರತ್ಕಲ್ ಜುಲೈ 2026 ರ NIT ಕರ್ನಾಟಕ ಅಧಿಕೃತ ಅಧಿಸೂಚನೆಯ ಮೂಲಕ ಪ್ರಾಜೆಕ್ಟ್ ಅಸೋಸಿಯೇಟ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಸುರತ್ಕಲ್ ? ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 12-ಜುಲೈ-2026 ರಂದು ಅಥವಾ ಅದಕ್ಕೂ ಮೊದಲು ಇ-ಮೇಲ್ ಕಳುಹಿಸಬಹುದು ಅಧಿಕೃತ ವೆಬ್‌ಸೈಟ್: nitk.ac.in


## ಅರಳಿಹಳ್ಳಿ ತಾಂಡದಲ್ಲಿ ಸಿಸಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಂಕುಸ್ಥಾಪನೆ

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ: ತಾಲೂಕಿನ ಸಣಾಪುರ ಗ್ರಾಪಂಯ ಅರಳಿಹಳ್ಳಿ ತಾಂಡದಲ್ಲಿ 2026-27ನೇ ಸಾಲಿನ ತಾಂಡ ಅಭಿವೃದ್ಧಿ ನಿಗಮದ ಸುಮಾರು 20 ಲಕ್ಷ ವೆಚ್ಚದಲ್ಲಿ ನಿರ್ಮಿಸಲಿರುವ ಸಿಸಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಸ್ಥಳೀಯ ಮುಖಂಡರು ಶಂಕುಸ್ಥಾಪನೆ ನೆರವೇರಿಸಿದರು.ನಂತರ ಮುಖಂಡ ಕೆ.ಲಿಂಗಪ್ಪ ಮಾತನಾಡಿ,**



ಅರಳಿಹಳ್ಳಿ ತಾಂಡಕ್ಕೆ ಹೆಚ್ಚಿನ ಮುತುವರ್ಜಿವಹಿಸಿ, ಸಾಕಷ್ಟು ಅಭಿವೃದ್ಧಿ ಕಾರ್ಯಗಳೊಂದಿಗೆ ಸೌಲಭ್ಯಗಳನ್ನು ಕಲ್ಪಿಸುತ್ತಿದ್ದಾರೆ. ಈಗ ಸಿಸಿ ರಸ್ತೆ ಅಭಿವೃದ್ಧಿ ಚಾಲನೆ ಸಿಕ್ಕಿದೆ. ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿಯನ್ನು ಕಾಲ ಮಿತಿಯಲ್ಲಿ ಪೂರ್ಣಗೊಳಿಸಬೇಕು. ಕ್ಷೇತ್ರದಲ್ಲಿ ಜನಪರ ಸೇವೆಯೊಂದಿಗೆ ಮೂಲಸೌಕರ್ಯ ಕಲ್ಪಿಸಿದ್ದಾರೆ ಎಂದರು. ಈ ಸಂದರ್ಭದಲ್ಲಿ ಮುಖಂಡರಾದ ಪೇಂಟರ್ ಮಸ್ತಾನ್, ಎ.ಕೆ. ಗವಿಸಿದ್ದಪ್ಪ, ಇಟಗಿ ವಿರೇಶ ಸೇರಿದಂತೆ ಸ್ಥಳೀಯರಿದ್ದರು.

## ಎಸ್‌ಐಆರ್ ಪ್ರಕ್ರಿಯಲ್ಲಿ ಶೇ.95ರಷ್ಟು ಪ್ರಗತಿ: ಜಿಲ್ಲಾ ಚುನಾವಣಾಧಿಕಾರಿ ಪೂವಿತಾ ಎಸ್.

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು ಜುಲೈ 09 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯ (ಎಸ್‌ಐಆರ್) ಭಾಗವಾಗಿ ಜುಲೈ 08ರ ಬುಧವಾರ ಸಂಜೆ ವೇಳೆಗೆ ಜಿಲ್ಲಾದ್ಯಂತ ಇವರೆಗೆ 16,28,842 ಲಕ್ಷ ಮತದಾರರ ಗಣತಿ ನಮೂನೆಯನ್ನು ವಿತರಿಸಲಾಗಿದೆ. ಜಿಲ್ಲೆಯಲ್ಲಿ ಒಟ್ಟು 17,14,559 ಮತದಾರರ ಪೈಕಿ ಈವರೆಗೆ ಶೇ.95ರಷ್ಟು ಪ್ರಗತಿ ಸಾಧಿಸಲಾಗಿದೆ.**



ಜಿಲ್ಲೆಯಲ್ಲಿ ಈವರೆಗೆ ವಿತರಿಸಲಾದ ಗಣತಿ ನಮೂನೆಗಳ ಪೈಕಿ 25.53 ಲಕ್ಷ ಮತದಾರರ ನಮೂನೆಗಳನ್ನು ಡಿಜಿಟಲೀಕರಿಸಲು ಸಾಧ್ಯವಾಗಿದೆ. 1,426 ಮತದಾರರು ಈವರೆಗೆ ಆನ್‌ಲೈನ್ ಮೂಲಕ ಗಣತಿ ನಮೂನೆಗಳನ್ನು ಭರ್ತಿ ಮಾಡಿದ್ದಾರೆ. ಸ್ಥಳದಲ್ಲಿ ಇಲ್ಲದ, ಬೇರೆ ವಿಳಾಸಕ್ಕೆ ಸ್ಥಳಾಂತರವಾದ, ಮೃತಪಟ್ಟ ಮತ್ತು ಎರಡು ಕಡೆ ನೋಂದಣಿಯಾದ ಒಟ್ಟು 6,384 ಮತದಾರರ ವಿವರ ಲಭ್ಯವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಲ್.ಬಿ.ಎಸ್ ನಿವಾಸಿ ಎನ್.ನಾಗೇಂದ್ರ ಕಾಣೆ: ಪತ್ತೆಗೆ ಪೊಲೀಸರ ಮನವಿ

❑ ನೈಜ್ಯ ದೆಸೆ ನ್ಯೂಸ್

**ರಾಯಚೂರು ಜುಲೈ 09 (ಕರ್ನಾಟಕ ವಾರ್ತೆ): ರಾಯಚೂರು ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆ ವ್ಯಾಪ್ತಿಯ ಎಲ್.ಬಿ.ಎಸ್ ನಗರದ ನಿವಾಸಿಯಾದ ಎನ್.ನಾಗೇಂದ್ರ ತಂದೆ ಭೀಮಾರಾವ್ (50) ಎಂಬ ವ್ಯಕ್ತಿಯು ಜೂನ್ 13ರ ಬೆಳಿಗ್ಗೆ 9.30ಕ್ಕೆ ರಾಯಚೂರಿನ ರಿಮ್ಸ್ ಆಸ್ಪತ್ರೆಗೆ ಹೋಗಿ ಬರುತ್ತೇನೆ ಎಂದು ಮನೆಯಿಂದ ಹೋದವರು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಈ ಕುರಿತು ಮಾರ್ಕೆಟ್ ಯಾರ್ಡ್ ಪೊಲೀಸ್ ಠಾಣೆಯಲ್ಲಿ ಗುನ್ನ ಸಂಖ್ಯೆ: 64/2026ರಡಿ ಪ್ರಕರಣ ದಾಖಲಾಗಿದೆ.**



**ಕಾಣೆಯಾದ ಮನುಷ್ಯನ ಚಹರೆ: ಜಾತಿ ಮರಾಠ, ಉದ್ಯೋಗ ಇನ್ಸೂರೆನ್ಸ್ ಆಫೀಸ್ ನಲ್ಲಿ ಕೆಲಸ ಮಾಡುತ್ತಿದ್ದು,** ಕಪ್ಪು ಮೈಬಣ್ಣ, ಸಾದರಣ ಮೈಕಟ್ಟು, ದಪ್ಪನೆಯ ಮೂಗು, ಆತನು ಕನ್ನಡ ಮತ್ತು ತೆಲುಗು ಹಾಗೂ ಹಿಂದಿ, ಮರಾಠಿ ಭಾಷೆಗಳನ್ನು ಮಾತನಾಡುತ್ತಾನೆ. **ಮನೆಯಿಂದ ಹೋಗುವಾಗ ಹಳದಿ ಬಣ್ಣದ ಶರ್ಟ್, ನೀಲಿ ಬಣ್ಣದ ಲುಂಗಿ ಧರಿಸಿದ್ದು, ಈ ಚಹರೆ ಪಟ್ಟಿಯ ವ್ಯಕ್ತಿ ಪತ್ತೆಯಾದಲ್ಲಿ ಮಾರ್ಕೆಟ್ ಯಾರ್ಡ ಠಾಣೆ ಪಿ.ಎಸ್.ಐ ಮೊಬೈಲ್ ಸಂಖ್ಯೆ: 9480803849 ಅಥವಾ ಠಾಣೆ ದೂರವಾಣಿ ಸಂಖ್ಯೆ: 08532-235600ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿಸದ್ದಾರೆ.**

# ಜೋತು ಬಿದ್ದ ವಿದ್ಯುತ್ ತಂತಿಗಳು : ಸರಿಪಡಿಸದ ಜೆಸ್ಕಾಂ ಅಧಿಕಾರಿಗಳು : ಆತಂಕದಲ್ಲಿ ನಿವಾಸಿಗಳ ಬದುಕು

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ : ಪಟ್ಟಣದ ಎಂ.ಡಿ.ಕ್ಯಾಂಪಿನ 22ನೇ ವಾರ್ಡಿನ ಸ್ಲಂ ಬಡಾವಣೆ ಮನೆಗಳ ಮೇಲೆ ವಿದ್ಯುತ್ ತಂತಿ ಹಾದು ಹೋಗಿದೆ. ಇದರಿಂದ ಬಡಾವಣೆ ನಿವಾಸಿಗಳು ಆತಂಕದಲ್ಲಿ ಜೀವನ ಸಾಗಿಸಬೇಕಿದೆ ಎಂದು ಬಡಾವಣೆ ನಿವಾಸಿಗಳು ಆರೋಪಿಸಿದ್ದಾರೆ.**

ಇಲ್ಲಿನ ಸ್ಲಂ ವಾರ್ಡಿನಲ್ಲಿರುವ ಮನೆಗಳಲ್ಲಿ ಕಳೆದ 20 ವರ್ಷಗಳಿಂದ ವಾಸಿಸುತ್ತಿದ್ದಾರೆ. 10 ಮನೆಗಳ ಮೇಲೆ ಹಾದು ಹೋಗಿರುವ ವಿದ್ಯುತ್ ತಂತಿಗಳು ಅಪಘಾತಕ್ಕೆ ಆಹ್ವಾನಿಸುತ್ತಿವೆ. ಈ ಮನೆಗಳ ಮೇಲೆ ವಿದ್ಯುತ್ ತಂತಿ ಹಾದು ಹೋಗಿವೆ. ಇವುಗಳನ್ನು ಬದಲಿಸುವಂತೆ ದೂರು ನೀಡಿದ್ದರೂ ಇಲಾಖೆಯವರು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ದೂರಿದ್ದಾರೆ. ಇಲ್ಲಿ ಮನೆಗಳ ಮೇಲೆ ಹೋದರೆ ಕೈಗೆಟುಕುವಂತೆ ವಿದ್ಯುತ್ ತಂತಿಗಳಿವೆ. ಮಳೆ ಬಂದರೆ ಎಲ್ಲಿ ಮನೆ ಗೋಡೆಗಳಿಗೆ ವಿದ್ಯುತ್ ಪ್ರವಹಿಸಿ ಅನಾಹುತ ಸಂಭವಿಸುತ್ತದೆಯೊ ಎಂಬ ಭಯ ಇಲ್ಲಿನ ಜನರಲ್ಲಿದೆ. ಮನೆಗಳ ಮೇಲೆ ಹೋದರೆ ಸಾಕು ಅನಾಹುತ



ಕಟ್ಟಿಟ್ಟ ಬುತ್ತಿ ಎಂಬಂತಿದೆ. ಇಲ್ಲಿನ ಜನರು ಕಡುಬಡವರಾಗಿದ್ದು, ಮನೆಯವರು ದಿನನಿತ್ಯದ ದುಡಿಮೆಗಾಗಿ ತೆರಳುವದುಂಟು. ಆದ್ದರಿಂದ ಮನೆಯವರು ಕೆಲಸಕ್ಕೆ ಹೋದಾಗ ಮಕ್ಕಳು ಮನೆ ಮೇಲೆ ಹೋದರೆ ಸಮಸ್ಯೆಯಾಗುತ್ತದೆ. ಇಲ್ಲಿನ ವಿದ್ಯುತ್ ತಂತಿಗಳು ಅಪಾಯಕ್ಕೆ ಆಹ್ವಾನಿಸುವಂತಿದೆ.

ಇಲ್ಲಿ ಅಪಾಯದಲ್ಲಿ ನಿವಾಸಿಗಳ ಗೋಳು ಕೇಳುವವರು ಇಲ್ಲದಂತಾಗಿದೆ. ಮತ್ತು ಇಲ್ಲಿ ನಿವಾಸಿ ಕಾರೇಕಲ್ ಅಂಜಿನಪ್ಪ ಅವರ ಮನೆ ಮೇಲೆ ಬಾಗಿರುವ ವಿದ್ಯುತ್ ತಂತಿಗಳಿಗೆ ಕಟ್ಟಿಗೆಗಳನ್ನು ಕಟ್ಟಿ ಪೋಟಿ ನೀಡಿದ್ದಾರೆ. ಆದರೆ, ಯಾವಾಗ ಅಪಾಯವಾಗುತ್ತದೋ ಎಂಬ ಆತಂಕ ಮನೆ ಮಾಡಿದೆ. ಇಲ್ಲಿನ ಕಂಬದೊಂದಿಗೆ ತಂತಿಗಳನ್ನು ಸ್ಥಳಾಂತರಿಸಬೇಕೆಂದು ಜೆಸ್ಕಾಂ ಅಧಿಕಾರಿಗಳಿಗೆ ಮನವಿ ಮಾಡಿದರೂ ಏನು ಪ್ರಯೋಜನೆ ಇಲ್ಲದಂತಾಗಿದೆ.

ಅಧಿಕಾರಿಗಳು ತಂತಿ ಸ್ಥಳಾಂತರಿಸದೆ ಬೇಜವಾಬ್ದಾರಿ ಪ್ರದರ್ಶಿಸುತ್ತಿದ್ದಾರೆ ಎಂದು ಆರೋಪಿಸುವ ಜೊತೆಗೆ ಕೂಡಲೇ ಕಂಬದೊಂದಿಗೆ ವಿದ್ಯುತ್ ತಂತಿಗಳನ್ನು ಸ್ಥಳಾಂತರಿಸಬೇಕು ಎಂದು ಬಡಾವಣೆ ನಿವಾಸಿಗಳಾದ ಹಮಾಲಿ ಸಂಘದ ಗೌರವಾಧ್ಯಕ್ಷ ಬಾಲಪ್ಪ, ಜಂಡೆಕಟ್ಟೆ ಅಂಜಿನಪ್ಪ, ಕೆ.ಹೊನ್ನೂರಸ್ವಾಮಿ ಒತ್ತಾಯಿಸಿದ್ದಾರೆ.

ಮನವಿ ಪತ್ರ ಸಲ್ಲಿಕೆ : ಸ್ಥಳೀಯ ಎಂ.ಡಿ.ಕ್ಯಾಂಪಿನ ಮನೆಗಳ ಮೇಲೆ ಹಾದು ಹೋಗಿರುವ ಅಪಾಯದ ವಿದ್ಯುತ್ ತಂತಿಗಳನ್ನು ಬೇರೆಡೆ ಸ್ಥಳಾಂತರಿಸಬೇಕೆಂದು ಆಗ್ರಹಿಸಿ, ನಿವಾಸಿಗಳು ಪಟ್ಟಣದ ತಹಶೀಲ್ದಾರ್ ಕಛೇರಿಯಲ್ಲಿ ತಹಶೀಲ್ದಾರ್ ಜೂಗಲ್ ಮಂಜುನಾಯಕಗೆ ಮನವಿ ಪತ್ರ ಮಂಗಳವಾರ ಸಲ್ಲಿಸಿದರು.

ನಂತರ ಮುಖಂಡ ಕರಡಿ ವಲಿಸಾಬ್ ಮಾತಬಾಡಿ, ಇಲ್ಲಿನ ನಿವಾಸಿಗಳು ವಿದ್ಯುತ್ ಅಪಾಯದ ನಡುವೆ ಜೀವನ ಸಾಗಿಸುತ್ತಿದ್ದಾರೆ. ಇಲ್ಲಿನ ತಂತಿಗಳು ಮನೆ ಮೇಲೆ ಜೋತು ಬಿದ್ದಿವೆ. ಜೋರಾಗಿ ಮಳೆ ಬೀಸಿದಾಗ ತಂತಿಗಳು ಒಂದಾನೊಂದು ಸ್ಪರ್ಶಿಸಿ, ಬೆಂಕಿ ಬೀಳುತ್ತದೆ. ಇಲ್ಲಿನ ನಿವಾಸಿಗಳಲ್ಲಿ ಚಿಕ್ಕ ಚಿಕ್ಕ ಮಕ್ಕಳಿದ್ದಾರೆ. ಕೆಲ ಸಲ ಮಕ್ಕಳನ್ನು ನಿವಾಸಿಗಳು ಅಪಾಯದಿಂದ ಪಾರು ಮಾಡಿದ್ದಾರೆ. ಈಗಾಗಲೇ ಸಂಬಂಧಿಸಿದ ಅಧಿಕಾರಿಗಳ ಗಮನಕ್ಕೆ ತಂದರೂ, ಪ್ರಯೋಜನೆಯಾಗುತ್ತಿಲ್ಲ. ಸ್ಥಳಕ್ಕೆ ಜೆಸ್ಕಾಂ ಲೈನ್ ಮ್ಯಾನ್ ಮತ್ತು ಜೆಇ ಬಂದು ಪರಿಶೀಲಿಸಿದರೂ ಸಮಸ್ಯೆಗೆ ಮುಕ್ತಿ ಇಲ್ಲದಂತಾಗಿದೆ. ಆದ-ರಿಂದ ಮಾನ್ಯ ತಹಶೀಲ್ದಾರ್ಗೆ ಮನವಿ ಸಲ್ಲಿಸಲಾಯಿತು. ಈಗಾಲಾದರೂ ಸಮಸ್ಯೆಗೆ ಬಗೆಹರಿಸುತ್ತದೆ ಎಂಬ ವಿಶ್ವಾಸವಿದೆ.

ಆದರೆ, ಇದೇ ತರ ಬೇಜವಾಬ್ದಾರಿ ತೋರಿದಲ್ಲಿ ಮುಂದಿನ ದಿನದಲ್ಲಿ ಜೆಸ್ಕಾಂ ಕಛೇರಿಗೆ ಮುತ್ತಿಗೆ ಹಾಕಲಾಗುವುದು ಎಂದು ಎಚ್ಚರಿಸಲಾಗುವುದು. ಈ ಸಂದರ್ಭದಲ್ಲಿ ಹಮಾಲಿ ಸಂಘದ ಗೌರವಾಧ್ಯಕ್ಷ ಬಾಲಪ್ಪ, ಜಂಡೆಕಟ್ಟೆ ಅಂಜಿನಪ್ಪ, ಕೆ.ಹೊನ್ನೂರಸ್ವಾಮಿ, ಸಿ.ಬಸವರಾಜ ಸೇರಿದಂತೆ ನಿವಾಸಿಗಳಿದ್ದರು.

ಸ್ಥಳ ಪರಿಶೀಲನೆ : ಇಲ್ಲಿನ ಎಂ.ಡಿ.ಕ್ಯಾಂಪಿನ ಸ್ಲಂ ವಾರ್ಡಿನ ಮನೆಗಳ ಮೇಲೆ ಜೋತು ಬಿದ್ದ ಸ್ಥಳಕ್ಕೆ ತಹಶೀಲ್ದಾರ್ ಜೂಗಲ್ ಮಂಜುನಾಯಕ ಭೇಟಿ ನೀಡಿ, ಪರಿಶೀಲಿಸಿ, ಸೂಕ್ತಕ್ರಮಕ್ಕೆ ಜೆಸ್ಕಾಂ ಅಧಿಕಾರಿಗಳಿಗೆ ಸೂಚಿಸಿದರು.

## 'ಯುವ ಸಮುದಾಯಕ್ಕೆ ಒಳಿತು ಕೆಡುಕುಗಳ ಬಗ್ಗೆ ಮನವರಿಕೆ ಮಾಡಿಕೊಡಲು ಸ್ವಾಸ್ಥ್ಯಸಂಕಲ್ಪ ಕಾರ್ಯಕ್ರಮ ರೂಪಿಸಿ'

❑ ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ/ಸಂಡೂರ್: ಯುವ ಸಮುದಾಯಕ್ಕೆ ಒಳಿತು ಕೆಡುಕುಗಳ ಬಗ್ಗೆ ಮನವರಿಕೆ ಮಾಡಿಕೊಡಲು ಸ್ವಾಸ್ಥ್ಯಸಂಕಲ್ಪ ಕಾರ?ಯಕ್ರಮ ರೂಪಿಸಿದ್ದು ದುಶ್ಚಟಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲಾಗುವುದು ಎಂದು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ತಾಲೂಕು ಯೋಜನಾಧಿಕಾರಿ ರಾಘವೇಂದ್ರ ಕೆ. ಹೇಳಿದರು.**

ತಾಲೂಕಿನ ಹೊಸ ದರೋಜಿ ಗ್ರಾಮದ ಸರಕಾರಿ ಪ್ರೌಢಶಾಲೆಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ಆಯೋಜಿಸಿದ್ದ ಸ್ವಾಸ್ಥ್ಯ ಸಂಕಲ್ಪ ಕಾರ?ಯಕ್ರಮದಲ್ಲಿ ಅವರು ಮಾತನಾಡಿದರು. ಯೋಜನೆಯಲ್ಲಿಯಲ್ಲಿ ಜನ ಜಾಗೃತಿ ವೇದಿಕೆಯ ಮೂಲಕ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮವನ್ನು ಆಯೋಜಿಸಿದೆ. ಪ್ರಸ್ತುತ ಪ್ರೌಢಶಾಲಾ ಹದಿ ಹರೆಯ ವಯಸ್ಸಿನ ವಿದ್ಯಾರ್ಥಿಗಳು ದುಶ್ಚಟಗಳಿಗೆ



ಬಲಿಯಾಗುತ್ತಿದೆ. ಆದ್ದರಿಂದ ಇಂತಹ ಸ್ವಾಸ್ಥ್ಯ ಕಾರ?ಯಕ್ರಮಗಳನ್ನು ನಮ್ಮ ಯೋಜನೆಯ ಮೂಲಕ ತಿಳಿಸಿಕೊಡುತ್ತಿದ್ದೇವೆ ಎಂದು ಹೇಳಿದರು.

ಸಂಪನ್ಮೂಲ ವ್ಯಕ್ತಿ ಬಡಿಗೇರ್ ಜಿಲಾನಸಾಬ್ ಮಾತನಾಡಿ ವಿದ್ಯಾರ್ಥಿಗಳಿಗೆ ಡಾ.ವೀರೇಂದ್ರ ಹೆಗ್ಗಡೆ ಹಾಗೂ ಹೇಮಾವತಿ ಅಮ್ಮನವರು ಇಂತಹ ಹಲವಾರು ಕಾರ್ಯಕ್ರಮಗಳ ಮುಖಾಂತರ ವಿದ್ಯಾರ್ಥಿ ಹಾಗೂ ಸಮಾಜವನ್ನು ತಿದ್ದಲು ಪ್ರಯತ್ನ ಮಾಡುತ್ತಿದ್ದಾರೆ. ಮಕ್ಕಳು ದುಶ್ಚಟಗಳಿಗೆ ಬಲಿಯಾಗುವುದನ್ನು ತಡೆಯಲು ಇದರ ಬಗ್ಗೆ ಅರಿವು ಮೂಡಿಸುವುದು ಮುಖ್ಯ ಉದ್ದೇಶವಾಗಿದೆ, ಈ ದಿಶೆಯಲ್ಲಿ ತಂದೆ-ತಾಯಿ ಹಾಗೂ ಗುರುಗಳು ಹೇಳಿದ ಮಾತುಗಳನ್ನು ವಿದ್ಯಾರ್ಥಿಗಳು ಆಲಿಸಬೇಕು. ಸಮಾಜದಲ್ಲಿ ಗೌರವ ವ್ಯಕ್ತಿಗಳಾಗಿ ಗುರ್ತಿಸಿಕೊಳ್ಳಬೇಕು ಎಂದರು. ಮುಖ್ಯೋಪಾಧ್ಯಾಯನಿ ಹುಲ್ಲೇಶಿ ಮಾತನಾಡಿ ದುಶ್ಚಟಗಳ ಜೊತೆಗೆ ಮೊಬೈಲ್ ಬಳಕೆ ಸಹ ಒಂದು ದುಶ್ಚಟವಾಗಿ ಪರಿಣಮಿಸಿದ್ದು ಇದನ್ನು ಮಿತಿಯೊಳಗೆ ಬಳಕೆ ಮಾಡುವುದರ ಮೂಲಕ ವಿದ್ಯಾಭ್ಯಾಸದ ಕಡೆಗೆ ಹೆಚ್ಚಿನ ಗಮನ ಹರಿಸಿ ಎಂದು ಮಕ್ಕಳಿಗೆ ಶುಭ ಹಾರೈಸಿದರು.

ಕಾರ?ಯಕ್ರಮದಲ್ಲಿ ಪ್ರಮುಖರಾದ ಕೆಎಸ್ ಗುರುಮೂರ್ತಿ, ಮಲ್ಲಿಕಾರ್ಜುನ ಸ್ವಾಮಿ, ಗ್ರಾಮ ಪಂಚಾಯಿತಿ ಸದಸ್ಯ ಮಾಯಣ್ಣ, ಶಿಕ್ಷಕಿಯರಾದ ಜ್ಯೋತಿ, ಕಲಾವತಿ, ವಲಯ ಮೇಲ್ ವಿಚಾರಕರಾದ ಎಚ್. ಮಂಜಣ್ಣ ಸೇವಾ ಪ್ರತಿನಿಧಿಗಳಾದ ಗೌರಮ್ಮ, ಸರೋಜಾ, ಸಹ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ದೆಹಲಿಯಲ್ಲಿ ಭಾರೀ ಮಳೆ : ರೆಡ್ ಅಲರ್ಟ್, ಕಿ.ಮೀಗಟ್ಟಲೆ ಟ್ರಾಫಿಕ್

❑ ನೈಜ್ಯ ದೆಸೆ ನ್ಯೂಸ್

**ನವದೆಹಲಿ : ಕಳೆದ ರಾತ್ರಿ ದೆಹಲಿಯಲ್ಲಿ ಸುರಿದ ಭಾರೀ ಮಳೆಯಿಂದಾಗಿ ರಸ್ತೆಗಳು ಜಲಾವೃತಗೊಂಡಿದ್ದು, ಮರಗಳು ಉರುಳಿಬಿದಿವೆ ನಗರದ ಹಲವಾರು ಭಾಗಗಳಲ್ಲಿ ಸಂಚಾರಕ್ಕೆ ಅಡ್ಡಿಯಾಗಿದೆ. ಭಾರತ ಹವಾಮಾನ ಇಲಾಖೆ (ಐಎಂಡಿ) ಹಗಲಿನಲ್ಲಿ ಹೆಚ್ಚಿನ ಮಳೆ, ಗುಡುಗು ಮತ್ತು ಮಿಂಚಿನ ಬಗ್ಗೆ 'ರೆಡ್' ಅಲರ್ಟ್ ಎಚ್ಚರಿಕೆ ನೀಡಿದೆ.**

ರಾಜಧಾನಿಯ ಮೂಲ ಹವಾಮಾನ ಕೇಂದ್ರವಾದ ಸಫ್ದರ್ಜಂಗ್ ನಲ್ಲಿ ಬೆಳಿಗ್ಗೆ 8.30 ಕ್ಕೆ




ಕೊನೆಗೊಂಡ 24 ಗಂಟೆಗಳಲ್ಲಿ 72.6 ಮಿಮೀ, ಲೋಧಿ ರಸ್ತೆ 80.2 ಮಿಮೀ, ರಿಡ್ಜ್ 77.8 ಮಿಮೀ, ಪಾಲಂ 63.0 ಮಿಮೀ ಮತ್ತು ಅಯನಗರ 57.4 ಮಿಮೀ ಮಳೆಯಾಗಿದೆ ಎಂದು ಐಎಂಡಿ ತಿಳಿಸಿದೆ. ಗುಡುಗು ಮತ್ತು ಮಿಂಚಿನೊಂದಿಗೆ ಮಧ್ಯಮದಿಂದ ಭಾರೀ ಮಳೆ ದಿನವಿಡೀ ಮುಂದುವರಿಯುವ ಸಾಧ್ಯತೆಯಿದೆ. ಕನಿಷ್ಠ ತಾಪಮಾನವು 24.3 ಡಿಗ್ರಿ ಸೆಲ್ಸಿಯಸ್‌ಗೆ ತಲುಪಿದ್ದು, ಇದು ಸಾಮಾನ್ಯಕ್ಕಿಂತ 3.6 ಡಿಗ್ರಿ ಕಡಿಮೆಯಾಗಿದೆ.

ಮಳೆಯಿಂದಾಗಿ ವ್ಯಾಪಕ ನೀರು ನಿಲ್ಲುವ ಕಾರಣ, ನಗರದ ಹಲವಾರು ಭಾಗಗಳಲ್ಲಿ ಸಂಚಾರದ ಮೇಲೆ ಪರಿಣಾಮ ಬೀರಿದೆ. ವಿಕಾಸ್ ಮಾರ್ಗ, ಪೂರ್ವ ದೆಹಲಿಯ ಕೆಲವು ಭಾಗಗಳು, ನವದೆಹಲಿ ರೈಲು ನಿಲ್ದಾಣ, ಮುನಿರ್ಕಾ, ಸದರ್ ಬಜಾರ್ ಮತ್ತು ದ್ವಾರಕಾದಲ್ಲಿ ರಸ್ತೆಗಳಲ್ಲಿ ನೀರು ಸಂಗ್ರಹವಾಯಿತು. ದೆಹಲಿ-ನೋಯ್ಡಾ ಎಕ್ಸ್‌ಪ್ರೆಸ್‌ವೇಯಲ್ಲಿ ನೀರು ನಿಂತ ಕಾರಣ ಸಂಚಾರ ನಿಧಾನವಾಗಿ ಚಲಿಸುತ್ತಿವೆ. ಆದರೆ ಪ್ರಯಾಣಿಕರು ಮತ್ತು ನಿವಾಸಿಗಳು ಜಲಾವೃತಗೊಂಡ ರಸ್ತೆಗಳು ಮತ್ತು ಸಂಚಾರ ದಟ್ಟಣೆಯ ಚಿತ್ರಗಳು ಮತ್ತು ವೀಡಿಯೊಗಳನ್ನು ಸಾಮಾಜಿಕ ಮಾಧ್ಯಮದಲ್ಲಿ ಹಂಚಿಕೊಳ್ಳುತ್ತಿದ್ದಾರೆ.

# ಸರ್ಕಾರಿ ಶಾಲೆಗಳಲ್ಲಿ ಗಾಯತ್ರಿ ಮಂತ್ರ ಪಠಣಕ್ಕೆ ಕೋರ್ಟ್ ಸಮ್ಮತಿ

❑ ನೈಜ್ಯ ದೆಸೆ ನ್ಯೂಸ್

**ಬಿಲಾಸ್‌ಪುರ: ಸರ್ಕಾರಿ ಶಾಲೆಗಳ ಬೆಳಗಿನ ಪ್ರಾರ್ಥನೆಯಲ್ಲಿ ಗಾಯತ್ರಿ ಮಂತ್ರ, ಸರಸ್ವತಿ ವಂದನೆ ಮತ್ತು ಶಾಂತಿ ಮಂತ್ರಗಳನ್ನು ಪಠಿಸುವುದನ್ನು ತಡೆಯಬೇಕು ಎಂದು ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಛತ್ತೀಸ್‌ಗಢ ಹೈಕೋರ್ಟ್ ವಜಾಗೊಳಿಸಿದೆ.**

ಯಾವುದೇ ನಿರ್ದಿಷ್ಟ ಧಾರ್ಮಿಕ ಸಿದ್ಧಾಂತವನ್ನು ಬಲವಂತವಾಗಿ ಹೇರದ ಹೊರತು, ಶಾಲೆಗಳಲ್ಲಿ ಭಾರತೀಯ ಸಂಸ್ಕೃತಿ ಮತ್ತು ನೈತಿಕ ಮೌಲ್ಯಗಳನ್ನು ಕಲಿಸುವುದನ್ನು ಸಂವಿಧಾನವು ನಿಷೇಧಿಸುವುದಿಲ್ಲ ಎಂದು ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ.

ಗಾಯತ್ರಿ ಮಂತ್ರ ವಿವಾದವೇನು, ಆದೇಶದಲ್ಲಿ ಏನಿದೆ?ಛತ್ತೀಸ್‌ಗಢ ಶಾಲಾ



ಶಿಕ್ಷಣ ಇಲಾಖೆಯು ಜೂನ್ 12 ರಂದು ಸುತ್ತೋಲೆಯೊಂದನ್ನು ಹೊರಡಿಸಿತ್ತು. ಅದರ ಪ್ರಕಾರ, 2026-27ನೇ ಸಾಲಿನಿಂದ ಎಲ್ಲಾ ಸರ್ಕಾರಿ ಶಾಲೆಗಳ ಬೆಳಗಿನ ಪ್ರಾರ್ಥನೆ ವೇಳೆ ರಾಷ್ಟ್ರಗೀತೆ, ನಾಡಗೀತೆ, ಸರಸ್ವತಿ ವಂದನೆ, ಗುರು ಮಂತ್ರ ಹಾಗೂ ದಿನದ ಕೊನೆಯಲ್ಲಿ ಗಾಯತ್ರಿ ಮಂತ್ರ ಮತ್ತು ಶಾಂತಿ ಮಂತ್ರಗಳನ್ನು ಪಠಿಸಬೇಕು ಎಂದು ಸೂಚಿಸಲಾಗಿತ್ತು.

ಇದನ್ನು ವಿರೋಧಿಸಿ ಕೆಲವು ವ್ಯಕ್ತಿಗಳು ಹೈಕೋರ್ಟ್ ಮೆಟ್ಟಿಲೇರಿದ್ದರು. ಇದು ಶಿಕ್ಷಣದ ಕೇಸರೀಕರಣ ಮತ್ತು ಸಂವಿಧಾನದ ಜಾತ್ಯತೀತ ತತ್ವಕ್ಕೆ ವಿರುದ್ಧವಾಗಿದೆ. ಸರ್ಕಾರಿ ಅನುದಾನ ಪಡೆಯುವ ಶಾಲೆಗಳಲ್ಲಿ ಇಂತಹ ಧಾರ್ಮಿಕ ಮಂತ್ರಗಳನ್ನು ಕಡ್ಡಾಯಗೊಳಿಸುವುದರಿಂದ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳ ಧಾರ್ಮಿಕ ಸ್ವಾತಂತ್ರ್ಯಕ್ಕೆ ಧಕ್ಕೆಯಾಗುತ್ತದೆ ಎಂದು ಅರ್ಜಿದಾರರ ಪರ ವಕೀಲ ಆಮಿರ್ ಖಾನ್ ವಾದಿಸಿದ್ದರು. ಛತ್ತೀಸ್‌ಗಢ ಸರ್ಕಾರ ಈ ಆದೇಶವು ಯಾವುದೇ ಧರ್ಮವನ್ನು ಪ್ರಚಾರ ಮಾಡುವ ಉದ್ದೇಶ ಹೊಂದಿಲ್ಲ. ಇದು ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯಡಿ ಭಾರತೀಯ ಜ್ಞಾನ ವ್ಯವಸ್ಥೆ ಮತ್ತು ಸಾಂಸ್ಕೃತಿಕ ಜಾಗೃತಿಯನ್ನು ವಿದ್ಯಾರ್ಥಿಗಳಲ್ಲಿ ಮೂಡಿಸುವ ಸದುದ್ದೇಶ ಹೊಂದಿದೆ.

ಜ್ಞಾನ ಮತ್ತು ಏಕಾಗ್ರತೆಯ ಸಂಕೇತ: ಗಾಯತ್ರಿ ಮಂತ್ರವು ಕೇವಲ ಪೂಜೆಯಲ್ಲ, ಅದು ಜ್ಞಾನ, ಬುದ್ಧಿವಂತಿಕೆ ಮತ್ತು ಸಕಾರಾತ್ಮಕ ಯೋಚನೆಗಳನ್ನು ನೀಡುವ ಮಂತ್ರವಾಗಿದೆ. ಇದು ವಿದ್ಯಾರ್ಥಿಗಳಲ್ಲಿ ಏಕಾಗ್ರತೆಯನ್ನು ಹೆಚ್ಚಿಸುತ್ತದೆ.ಯಾರ ಮೇಲೂ ಬಲವಂತವಿಲ್ಲ: ಸರ್ಕಾರದ ಆದೇಶದಲ್ಲಿರುವ ಕಡ್ಡಾಯ ಎಂಬ ಪದವು ಶಾಲೆಗಳಲ್ಲಿ ಶಿಸ್ತು ಕಾಪಾಡಲು ಮಾತ್ರ ಬಳಸಲಾಗಿದೆಯೇ ಹೊರತು ಯಾರ ಮೇಲೂ ಧರ್ಮ ಹೇರಲು ಅಲ್ಲ ಎಂದು ವಾದಿಸಿತ್ತು.

## ಹಿರೇಕೊಟ್ನೆಕಲ್ ಗ್ರಾಮ ಪಂಚಾಯತಿಯಲ್ಲಿ ಭಾರೀ ಅಕ್ರಮ ಆರೋಪ: ಉನ್ನತ ಮಟ್ಟದ ತನಿಖೆ ಹಾಗೂ ಪಿಡಿಓ ಅಮಾನತಿಗೆ 'ಗಜಪಡೆ' ಒತ್ತಾಯ

❑ ನೈಜ್ಯ ದೆಸೆ ನ್ಯೂಸ್

**ಮಾನ್ವಿ: ತಾಲೂಕಿನ ಹಿರೇಕೊಟ್ನೆಕಲ್ ಗ್ರಾಮ ಪಂಚಾಯತಿಯಲ್ಲಿ 15ನೇ ಹಣಕಾಸು ಯೋಜನೆ, ಗ್ರಂಥಾಲಯ ಅನುದಾನದ ಬಳಕೆ ಹಾಗೂ ಎರಡನೇ ಕರವಸೂಲಿಗಾರರ ನೇಮಕಾತಿಯಲ್ಲಿ ಗಂಭೀರ ಸ್ವರೂಪದ ಅಕ್ರಮಗಳು ನಡೆದಿರುವ ಆರೋಪ ಕೇಳಿಬಂದಿದ್ದು, ಈ ಕುರಿತು ಸಮಗ್ರ ತನಿಖೆ ನಡೆಸುವಂತೆ ಒತ್ತಾಯಿಸಿ ಅಖಿಲ ಭಾರತ ವಾಲ್ಮೀಕಿ ನಾಯಕರ ಗಜಪಡೆ (ರಿ) ಜಿಲ್ಲಾ ಘಟಕದ ವತಿಯಿಂದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ (CEO) ಮನವಿ ಸಲ್ಲಿಸಲಾಗಿದೆ.**

ಗ್ರಾಮ ಪಂಚಾಯತಿಯಲ್ಲಿ ಸಾರ್ವಜನಿಕ ಹಣದ ದುರುಪಯೋಗ ಮತ್ತು ನಕಲಿ ದಾಖಲೆಗಳ ಸೃಷ್ಟಿ ನಡೆದಿರುವ ಕುರಿತು ಗಜಪಡೆ ಸಂಘಟನೆಯ ಪದಾಧಿಕಾರಿಗಳು ಗಂಭೀರ ಆಕ್ಷೇಪ ಎತ್ತಿದ್ದಾರೆ. 15ನೇ ಹಣಕಾಸು ಯೋಜನೆಯಡಿ ಅಕ್ರಮ: 2024-25ನೇ ಸಾಲಿನ 15ನೇ ಹಣಕಾಸು ಯೋಜನೆಯಡಿ ಕೈಗೊಂಡಿರುವ ಸುಮಾರು



60 ಕಾಮಗಾರಿಗಳ ಓಚರ್ ಬಿಲ್‌ಗಳು, ಹಣ ಬಿಡುಗಡೆ ಹಾಗೂ ವೆಂಡರ್‌ಗಳ ಪಾತ್ರದ ಕುರಿತು ಗಂಭೀರ ಅನುಮಾನಗಳಿವೆ. ಅನೇಕ ಕಾಮಗಾ-ರಿಗಳು ಕಾಗದದ ಮೇಲಷ್ಟೇ ಉಳಿದಿದ್ದು, ಸ್ಥಳ ಪರಿಶೀಲನೆ ನಡೆಸಿ ತಪ್ಪಿತಸ್ಥ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಕ್ರಮ ಜರುಗಿಸಬೇಕು.

ಕರವಸೂಲಿಗಾರರ ನಿಯಮಬಾಹಿರ ನೇಮಕಾತಿ: ಗ್ರಾಮ ಪಂಚಾಯತಿಯಲ್ಲಿ ಎರಡನೇ ಕರವಸೂಲಿಗಾರರಾಗಿ ಅನುಮೋದನೆ ಪಡೆದಿರುವ ವ್ಯಕ್ತಿಯ ನೇಮಕಾತಿಯು ಸಂಪೂರ್ಣ ನಿಯಮಬಾಹಿರವಾಗಿದೆ.

ತಪ್ಪು ಮಾಹಿತಿ ಹಾಗೂ ನಕಲಿ ದಾಖಲೆಗಳ ಆಧಾರದ ಮೇಲೆ ಈ ಅನುಮೋದನೆ

**15ನೇ ಹಣಕಾಸು ಯೋಜನೆ, ಗ್ರಂಥಾಲಯ ಅನುದಾನದಲ್ಲಿ ವ್ಯಾಪಕ ಭ್ರಷ್ಟಾಚಾರದ ಶಂಕೆ.**
**ಎರಡನೇ ಕರವಸೂಲಿಗಾರರ ನಿಯಮಬಾಹಿರ ನೇಮಕಾತಿ ರದ್ದತಿಗೆ ಆಗ್ರಹ.**
**ದಾಖಲೆಗಳ ನಾಶ ತಡೆಯಲು ಪಿಡಿಓ ತಕ್ಷಣ ಅಮಾನತುಗೊಳಿಸಲು ಜಿಲ್ಲಾ ಪಂಚಾಯತ್ ಸಿಇಓಗೆ ಮನವಿ.**

ಪಡೆದಿರುವ ಸಾಧ್ಯತೆಯಿದ್ದು, ಈ ನೇಮಕಾತಿಯನ್ನು ತಕ್ಷಣವೇ ಮರುಪರಿಶೀಲಿಸಿ ರದ್ದುಪಡಿಸಬೇಕು. ಗ್ರಂಥಾಲಯ ಅನುದಾನದ ದುರುಪಯೋಗ: 2023-24ರಿಂದ 2025-26ನೇ ಸಾಲಿನವರೆಗೆ ಗ್ರಂಥಾಲಯಕ್ಕೆ ಬಿಡುಗಡೆಯಾದ ಅನುದಾನದ ಬಳಕೆ, ಖರೀದಿ ವಿವರಗಳು ಮತ್ತು ಓಚರ್ ಬಿಲ್‌ಗಳನ್ನು ಸಂಪೂರ್ಣ ಪರಿಶೀಲನೆಗೆ ಒಳಪಡಿಸಬೇಕು. ಹಣಕಾಸು ವ್ಯವಹಾರಗಳ ತನಿಖೆ: ದಿನಾಂಕ 02-02-2026 ರಿಂದ 06-07-2026ರವರೆಗಿನ ಅವಧಿಯಲ್ಲಿ ವಿವಿಧ ಕಾಮಗಾರಿಗಳ ಹೆಸ-ರಿನಲ್ಲಿ ಮಾಡಲಾದ ಖರ್ಚು-ವೆಚ್ಚಗಳು, ಬ್ಯಾಂಕ್ ಪಾಸ್ ಬುಕ್ ಪ್ರತಿಗಳು ಮತ್ತು ಚೆಕ್‌ಗಳ ವಿವರಗಳನ್ನು ಸೂಕ್ಷ್ಮವಾಗಿ ತನಿಖೆ ಮಾಡಬೇಕು. ಪಿಡಿಓ ಅಮಾನತಿಗೆ ತೀವ್ರ ಒತ್ತಾಯ: "ಹಿರೇಕೊಟ್ನೆಕಲ್ ಗ್ರಾಮ ಪಂಚಾಯತಿಯಲ್ಲಿ ಸಾರ್ವಜನಿಕ ನಿಧಿಗಳ ಬಳಕೆಯಲ್ಲಿ ವ್ಯಾಪಕ ಭ್ರಷ್ಟಾಚಾರ ಮತ್ತು ನಿಯಮ ಉಲ್ಲಂಘನೆ ನಡೆದಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ. ಈ ಪ್ರಕರಣದ ತನಿಖೆ ನಿಷ್ಪಕ್ಷಪಾತವಾಗಿ ನಡೆಯಬೇಕಾದರೆ ಮತ್ತು ಸಾಕ್ಷ್ಯಾಧಾರಗಳ ನಾಶ ಹಾಗೂ ದಾಖಲೆಗಳ ತಿರುಚುವಿಕೆಯನ್ನು ತಡೆಯಬೇಕಾದರೆ, ತಕ್ಷಣವೇ ಸಂಬಂಧಪಟ್ಟ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಕಆಔ) ಹಾಗೂ ಇತರ ಅಧಿಕಾರಿಗಳನ್ನು ಅಮಾನತುಗೊಳಿಸಬೇಕು," ಎಂದು ಗಜಪಡೆ ಸಂಘಟನೆಯ ಜಿಲ್ಲಾಧ್ಯಕ್ಷರಾದ ಈರಣ್ಣ ನಾಯಕ ಅವರು ತೀವ್ರವಾಗಿ ಆಗ್ರಹಿಸಿದ್ದಾರೆ.

ಮನವಿ ಸಲ್ಲಿಸುವ ಈ ಸಂದರ್ಭದಲ್ಲಿ ಸಂಘಟನೆಯ ಪದಾಧಿಕಾರಿಗಳಾದ ಕಿರಣ್ ಕುಮಾರ್, ವೆಂಕಟೇಶ್ ನಾಯಕ ಸೇ-ರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### BMS (Bachelor of Management Studies)

BMS (Bachelor of Management Studies) ಎಂಬುದು 3 ವರ್ಷಗಳ ಪದವಿ (Undergraduate) ಕೋರ್ಸ್ ಆಗಿದ್ದು, ವ್ಯವಹಾರ ನಿರ್ವಹಣೆ (Business Management), ನಾಯಕತ್ವ (Leadership), ಹಣಕಾಸು (Finance), ಮಾರ್ಕೆಟಿಂಗ್ (Marketing) ಮತ್ತು ಮಾನವ ಸಂಪನ್ಮೂಲ (HR) ವಿಷಯಗಳಲ್ಲಿ ಜ್ಞಾನ ಮತ್ತು ಕೌಶಲ್ಯವನ್ನು ನೀಡುತ್ತದೆ.

1. ಕೋರ್ಸ್ ಪೂರ್ಣ ಹೆಸರು
Bachelor of Management Studies (BMS)

2. ಕೋರ್ಸ್ ಅವಧಿ
3 ವರ್ಷಗಳು
6 ಸೆಮಿಸ್ಟರ್‌ಗಳು

3. ಅರ್ಹತೆ
12ನೇ ತರಗತಿ (ಯಾವುದೇ ವಿಭಾಗ ? Arts, Commerce CxÀªÁ Science)
ಸಾಮಾನ್ಯವಾಗಿ 45?50% ಅಥವಾ ಅದಕ್ಕಿಂತ ಹೆಚ್ಚು ಅಂಕಗಳು (ಕಾಲೇಜಿನ ನಿಯಮದಂತೆ ಬದಲಾಗಬಹುದು).

4. ಪ್ರವೇಶ ವಿಧಾನ
12ನೇ ತರಗತಿ ಅಂಕಗಳ ಆಧಾರದಲ್ಲಿ ಅಥವಾ
ಕೆಲವು ವಿಶ್ವವಿದ್ಯಾಲಯಗಳಲ್ಲಿ ಪ್ರವೇಶ ಪರೀಕ್ಷೆಯ ಮೂಲಕ.

5. ಪ್ರಮುಖ ವಿಷಯಗಳು
Principles of Management
Marketing Management
Financial Management
Human Resource Management
Business Economics
Business Law
Accounting
Business Statistics
Organizational Behaviour
Entrepreneurship
Operations Management
Business Communication

6. ಕೋರ್ಸ್ ಶುಲ್ಕ
ಕಾಲೇಜಿನ ಪ್ರಕಾರ ಸುಮಾರು ?50,000 ರಿಂದ ?3,00,000 (ಒಟ್ಟು ಕೋರ್ಸ್‌ಗೆ ಬದಲಾಗಬಹುದು).

7. ಉದ್ಯೋಗಾವಕಾಶಗಳು
HR Executive
Marketing Executive
Business Development Executive
Sales Manager
Operations Executive
Financial Analyst
Business Consultant
Project Coordinator

8. ಉನ್ನತ ಶಿಕ್ಷಣ
MBA
PGDM
M.Com
MMS
ವಿವಿಧ ಮ್ಯಾನೇಜ್‌ಮೆಂಟ್ ಪ್ರಮಾಣಪತ್ರ ಕೋರ್ಸ್‌ಗಳು

9. ಆರಂಭಿಕ ವೇತನ
ವರ್ಷಕ್ಕೆ ಸುಮಾರು 3 ಲಕ್ಷದಿಂದ ?7 ಲಕ್ಷ (ಕೌಶಲ್ಯ, ಕಂಪನಿ ಮತ್ತು ಸ್ಥಳದ ಆಧಾರದ ಮೇಲೆ ಬದಲಾಗುತ್ತದೆ).

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## 650ಕ್ಕೂ ಅಧಿಕ ಜನರಿಂದ ನೋಂದಣಿ – ಶಾಲಾ ಕಾಲೇಜಿನ ವಿದ್ಯಾರ್ಥಿಗಳು, ಯುವ ಜನರು, ಸಾರ್ವಜನಿಕರು ಭಾಗಿ

❑ ನೈಜ್ಯ ದೆಸೆ ನ್ಯೂಸ್



**ರಾಯಚೂರು ಜುಲೈ 09 (ಕರ್ನಾಟಕ ವಾರ್ತೆ): ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ರಾಯಚೂರು ಮಹಾನಗರ ಪಾಲಿಕೆ ವತಿಯಿಂದ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ?2026ರ ಹಾಗೂ ನಗರ ಸ್ವಚ್ಛತೆ ಮತ್ತು ಘನತ್ಯಾಜ್ಯ ನಿರ್ವಹಣೆಯ ಹೊಸ ನಿಯಮಗಳ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಸದೃಢ ದೇಹ ? ಸ್ವಚ್ಛ ಸಮಾಜ ಬಲಿಷ್ಠ ಪ್ರಜಾಪ್ರಭುತ್ವಕ್ಕಾಗಿ ಜುಲೈ 09ರ ಗುರುವಾರ ದಂದು ರಾಯಚೂರು ನಗರದಲ್ಲಿ ಮ್ಯಾರಥಾನ್ ಓಟ ಹಾಗೂ ಸೈಕ್ಲೋಥಾನ್ ನಡೆಯಿತು.**

ರಾಯಚೂರು ನಗರದ ವಿವಿಧ ಶಾಲಾ ಕಾಲೇಜಿನ ವಿದ್ಯಾರ್ಥಿಗಳು, ಯುವಜನರು, ಮಹಿಳೆಯರು ಸೇರಿದಂತೆ ಇತರೆ ಹಲವಾರು ಜನರು ಭಾಗಿಯಾಗಲು ಬೆಳಗಿನ ಸಮಯದಲ್ಲಿ ನಗರದ ಮಹಾತ್ಮ ಗಾಂಧೀಜಿ ಜಿಲ್ಲಾ ಕ್ರೀಡಾಂಗಣದಲ್ಲಿ ಬಂದು ಸೇರಿದ್ದರು.

ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಮ್ಯಾರಾಥಾನಗೆ ಹಸಿರು ಬಾವುಟ ತೋರುತ್ತಿದ್ದಂತೆ ಸ್ಪರ್ಧಾಳುಗಳು ನಾಮುಂದೆ ತಾಮುಂದೆ ಎನ್ನುವಂತೆ ಓಟ ಆರಂಭಿಸಿದರು. ರಾಯಚೂರು ಜಿಲ್ಲಾ ಕ್ರೀಡಾಂಗಣದಿಂದ ಓಟ ಆರಂಭಿಸಿದ ಸ್ಪರ್ಧಾಳುಗಳು ಡಾ.ಬಿ.ಆರ್. ಅಂಬೇಡ್ಕರ್ ವೃತ್ತ, ತೀನ್ ಕಂದಿಲ್, ಮಹಾವೀರ ವೃತ್ತ, ಚಂದ್ರಮೌಳೇಶ್ವರ ವೃತ್ತ ಹಾಗೂ ಬಸವೇಶ್ವರ ವೃತ್ತ ಮಾರ್ಗವಾಗಿ ಮರಳಿ ಕ್ರೀಡಾಂಗಣಕ್ಕೆ ಬಂದು ಸೇರಿದರು. ಈ ಓಟದಲ್ಲಿ ಪುರುಷರ ವಿಭಾಗದಲ್ಲಿ ತಾಯಪ್ಪ ನಾಯಕ ಪ್ರಥಮ ಬಹುಮಾನ, ನರಸಿಂಹಲು ದ್ವಿತೀಯ ಬಹುಮಾನ ಮತ್ತು ನರಸಿಂಹಲು ವಡವಟ್ಟಿ ತೃತೀಯ ಬಹುಮಾನ ಗಿಟ್ಟಿಸಿ ಗೆಲುವಿನ ನಗೆ ಬೀರಿದರು. ಮಹಿಳಾ ವಿಭಾಗದಲ್ಲಿ ಮಹೇಶ್ವರಿ ಪ್ರಥಮ, ನಂದಿತಾ ರಾಯಚೂರು ದ್ವಿತೀಯ ಹಾಗೂ ಪದ್ಮವತಿ ಅವರು ತೃತೀಯ ಬಹುಮಾನ ಪಡೆದುಕೊಂಡು ಸಂತಷ ವ್ಯಕ್ತಪಡಿಸಿದರು.

ಈ ವೇಳೆ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಮಾತನಾಡಿ, ಜಿಲ್ಲೆಯಲ್ಲಿ ಎಸ್.ಐ.ಆರ್‌ಗೆ ವೇಗ ನೀಡಲು ಜಿಲ್ಲಾಡಳಿತ ಸೇರಿದಂತೆ ವಿವಿಧ ಇಲಾಖೆಯ ಸಂಯೋಗದಲ್ಲಿ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಪ್ರತಿಯೊಬ್ಬ ಮತದಾರರು ಜಿಲ್ಲಾಡಳಿತದೊಂದಿಗೆ ಕೈಜೋಡಿಸುವ ಮೂಲಕ ಎಸ್.ಐ.ಆರ್. ಪ್ರಕ್ರಿಯೆ ಯಶಸ್ವಿಗೆ ಸಹಕಾ–ರಿಸಬೇಂಕು ಸಾರ್ವಜನಿಕರಲ್ಲಿ ಕೋರಿದರು. ಜಿಲ್ಲೆಯಲ್ಲಿ ಎಸ್.ಐ.ಆರ್ ಪ್ರಕ್ರಿಯೆವು ಪ್ರಾರಂಭವಾಗಿ 8 ರಿಂದ 10 ದಿನಗಳಾಗಿದ್ದು, ಶೇ.90ಕ್ಕಿಂತ ಹೆಚ್ಚು ಗಣತಿ ನಮೂನೆಗಳನ್ನು ಮತದಾರರಿಗೆ ನೀಡಲಾಗಿದೆ. ಮತ್ತೆ ಅದನ್ನು ಮರಳಿ ಪಡೆಯಲು ಹಾಗೂ ಆನ್‌ಲೈನ್ ನೋಂದಣಿ ಮಾಡುವ ಕೆಲಸವಾಗುತ್ತಿದ್ದು, ಸಾರ್ವಜನಿಕರು ಅರ್ಜಿಗಳನ್ನು ಭರ್ತಿ ಮಾಡಿ ನಿಗದಿತ ಸಮಯದಲ್ಲಿ ಸಂಬಂಧಿಸಿದ ಬಿಎಲ್‌ಒ ಅಧಿಕಾರಿಗಳಿಗೆನೀಡಬೇಕು. ಬಿಎಲ್‌ಒಸಂಬಂಧಿಸಿದಮನೆಗೆ ಬಂದಾಗ ಸಾರ್ವಜನಿಕರು ಅವರಿಗೆ ಸಹಕಾರ ನೀಡಬೇಕೆಂದು ಹೇಳಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ಜಿಲ್ಲೆಯಲ್ಲಿ ಎಸ್.ಐ.ಆರ್. ಕುರಿತು ಬಿಎಲ್‌ಒಗಳು ಮತದಾರರ ಮನೆಗೆ ಬಂದಾಗ ಅಗತ್ಯ ದಾಖಲಾತಿಗಳನ್ನು ನೀಡಿ, ಅವರಿಗೆ ಸಹಕಾರಿಸಬೇಕು. ಜಿಲ್ಲೆಯಲ್ಲಿ ಉತ್ತಮವಾದ ವಾತಾರಣವಿದೆ. ಮುಂದೆಯೂ ಇದೇ ರೀತಿಯಲ್ಲಿ ಸಾರ್ವಜನಿಕರು ಸಹಕಾ–ರಿಸಬೇಕೆಂದರು.

ರಾಯಚೂರು ಮಹಾನಗರ ಪಾಲಕೆಯ ಆಯುಕ್ತರಾದ ಜುಬಿನ್ ಮೊಹೊಪಾತ್ರ ಅವರು ಮಾತನಾಡಿ, ಭಾತರ ಚುನಾವಣಾ ಆಯೋಗದ ನಿರ್ದೇಶದನದಂತೆ ಮತದಾರರ ಸಮಗ್ರ ಪರಿಷ್ಕರಣೆ ಕಾರ್ಯವು ಪ್ರಗತಿಯಲ್ಲಿದ್ದು, ರಾಯಚೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಶೇ.87ರಷ್ಟು ಪ್ರಗತಿ ಸಾಧಿಸಲಾಗಿದೆ. ಎಲ್ಲಾ ರಾಜಕೀಯ ಪಕ್ಷದ ಬೂತ್ ಏಜೆಂಟರಗಳು ನಮ್ಮೊಂದಿಗೆ ಕೈಜೋಡಿಸಬೇಕೆಂದರು.

ಇದಕ್ಕೂ ಮುಂಚೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್. ಕಾರ್ಯಕ್ರಮಕ್ಕೆ ಸಹಕಾರ ನೀಡುವ ಕುರಿತು ಹಸ್ತಾಕ್ಷರ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ನಂತರ ಜಿಲ್ಲಾಧಿಕಾರಿ ಪೂವಿತಾ ಎಸ್. ಅವರು ಸೇರಿದಂತೆ ವಿವಿಧ ಗಣ್ಯರು ಸೆಲ್ಫಿ ಸ್ಟ್ಯಾಂಡಿಗೆ ಫೋಟೋ ನೀಡಿದರು.

ಇದೇ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಮಹಾನಗರ ಪಾಲಿಕೆ ಉಪ ಆಯುಕ್ತ ಶರಣಪ್ಪ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲ ಸಿದ್ದಪ್ಪ ಪೂಜಾರಿ,

ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಡಾ.ಟಿ.ರೋಣಿ, ರಾಯಚೂರು ಮಹಾನಗರ ಪಾಲಿಕೆಯ ಸದಸ್ಯ ಕಾರ್ಯದರ್ಶಿ ಕೃಷ್ಣ, ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ, ರಾಯಚೂರು ತಹಸೀಲ್ದಾರ್ ಸುರೇಶ್ ವರ್ಮ, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರೇಶ್ ನಾಯಕ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಸುರೇಶ ಜಿ., ಮಹಾನಗರ ಪಾಲಿಕೆಯ ಜೋನಲ್ ಆಯುಕ್ತ ಮಲಿಕಾರ್ಜುನ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು, ವಿವಿಧ ಶಾಲಾ ಕಾಲೇಜಿನ ವಿದ್ಯಾರ್ಥಿಗಳು ಇದ್ದರು. ಕಾರ್ಯಕ್ರಮದ ನಿರೂರ್ಪಣೆಯನ್ನು ಎಸ್‌ಐಆರ್ ಕಾರ್ಯಕ್ರಮದ ಸಂಯೋಜನಾ ಅಧಿಕಾರಿ ಡಾ.ದಂಡಪ್ಪ ಬಿರಾದಾರ್ ಅವರು ಮಾಡಿದರು.

## ಪತಾಳಗಂಗಾ ನದಿಯಲ್ಲಿ ತೇಲುತ್ತಿರುವ 3 ಸಾವಿರ ಸಿಲಿಂಡರ್‌ಗಳ

❑ ನೈಜ್ಯ ದೆಸೆ ನ್ಯೂಸ್





**ರಾಯಗಡ: ಮಹಾರಾಷ್ಟ್ರದ ರಾಯಗಡದಿಂದ ಭಾರೀ ಮಳೆಯ ನಡುವೆ ಆಘಾತಕಾರಿ ವಿಡಿಯೋವೊಂದು ಹೊರಬಿದ್ದಿದೆ. ಊಕಅಐ ಪಾತಾಳಗಂಗಾ ಐಕಲು ಬಾಟ್ಲಿಂಗ್ ಪ್ಲಾಂಟ್‌ನಿಂದ ನೀರಿನ ಬಲವಾದ ಹರಿವಿನಿಂದ ಸುಮಾರು 3,000 ಗ್ಯಾಸ್ ಸಿಲಿಂಡರ್‌ಗಳು ಕೊಚ್ಚಿಹೋಗಿ ಪಾತಾಳಗಂಗಾ ನದಿಯಲ್ಲಿ ತೇಲುತ್ತಿರುವಂತೆ ಕಂಡುಬಂದಿದೆ.**

ಧಾರಾಕಾರ ಮಳೆಯಿಂದಾಗಿ, ಸ್ಥಾವರದ ರಕ್ಷಣಾ ಗೋಡೆ ಕುಸಿದು ಪ್ರವಾಹದ ನೀರು ನೇರವಾಗಿ ಆವರಣಕ್ಕೆ ಪ್ರವೇಶಿಸಿ ಸಿಲಿಂಡರ್‌ಗಳು ತೇಲಿ ಹೋದವು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಂತರ ಸಿಲಿಂಡರ್‌ಗಳು ಪಾತಾಳಗಂಗಾ ನದಿ ಮತ್ತು ಖಾರ್ಪಾಡಾ ಕ್ರೀಕ್‌ಗೆ ಕೊಚ್ಚಿಹೋಗಿವೆ. ಜನರು ಸೇತುವೆಯಿಂದ ತೇಲುವ ಸಿಲಿಂಡರ್‌ಗಳ ದೃಶ್ಯಗಳನ್ನು ಸೆರೆಹಿಡಿಯುತ್ತಿದ್ದಾರೆ.

ರಾಯಗಡ ಜಿಲ್ಲಾಧಿಕಾರಿ ಕಿಶನ್ ಜವಾಲೆ ಅವರು, ನದಿಯಲ್ಲಿ ಕಂಡುಬರುವ ಅಥವಾ ದಡಕ್ಕೆ ಬರುವ ಸಿಲಿಂಡರ್ ಯಾವ ಸ್ಥಿತಿಯಲ್ಲಿವೆ ಎಂಬ ಬಗ್ಗೆ ಮಾಹಿತಿ ಇಲ್ಲ. ಇದ–ರಿಂದಾಗಿ ಅವುಗಳ ಬಳಿಗೆ ಹೋಗದಂತೆ ಜನ–ರಿಗೆ ಮನವಿ ಮಾಡಿದ್ದಾರೆ. ಯಾವುದೇ ಸಿಲಿಂಡರ್‌ನ್ನು ಎತ್ತಿಕೊಳ್ಳಬಾರದು, ಸ್ಥಳಾಂತ–ರಿಸಬಾರದು ಅಥವಾ ಮನೆಗೆ ತೆಗೆದುಕೊಂಡು ಹೋಗಬಾರದು ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

ಯಾವುದೇ ಸಿಲಿಂಡರ್ ಕಾಣಿಸಿದರೂ ತಕ್ಷಣ ಸ್ಥಳೀಯ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು. ಅದರಿಂದ ಸುರಕ್ಷಿತ ಅಂತರವನ್ನು ಕಾಯ್ದುಕೊಳ್ಳಬೇಕು. ಅವುಗಳನ್ನು ಮುಟ್ಟುವುದ–ರಿಂದ ಜೀವಕ್ಕೆ ಅಪಾಯ ಆಗುವ ಸಾಧ್ಯತೆ ಇದೆ ಎಂದು ಸಾರ್ವಜನಿಕರಿಗೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಜಿಲ್ಲೆಯ ಕೆಲವು ಭಾಗಗಳಲ್ಲಿ ಭಾರೀ ಮಳೆಯಾಗುತ್ತಿರುವುದ–ರಿಂದ, ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದೇವೆ ಮತ್ತು ನಿವಾಸಿಗಳು ಜಾಗರೂಕರಾಗಿರಲು ಪದೇ ಪದೇ ಒತ್ತಾಯಿಸುತ್ತಿದ್ದೇವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಸಂಪುಟ ವಿಸ್ತರಣೆಯಾದರೆ ಸರ್ಕಾರ ಸ್ವಲ್ಪ ಅಲ್ಲಾಡಬಹುದು : ಸತೀಶ್ ಜಾರಕಿಹೊಳಿ

❑ ನೈಜ್ಯ ದೆಸೆ ನ್ಯೂಸ್



**ಬೆಂಗಳೂರು: ಸಂಪುಟ ವಿಸ್ತರಣೆಯಾದರೆ ಸ್ವಲ್ಪ ಮಟ್ಟಿಗೆ ಸರ್ಕಾರ ಅಲುಗಾಡಬಹುದು. ಆದರೆ ಏನೂ ಆಗುವುದಿಲ್ಲ. ಡಿ.ಕೆ.ಶಿವಕುಮಾರ್ ಅವರೇ ಮುಖ್ಯಮಂತ್ರಿಯಾಗಿರುತ್ತಾರೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ.**


ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಪುಟದಲ್ಲಿ ಹೊಸಬ–ರಿಗೆ ಅವಕಾಶ ನೀಡುವ ಕುರಿತು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಹೈಕಮಾಂಡ್ ನಿರ್ಧಾರ ಮಾಡುತ್ತದೆ ಎಂದು ಹೇಳಿದರು. ಸಂಪುಟ ವಿಸ್ತರಣೆಯ ವೇಳೆ ಸರ್ಕಾರ ಬುಡ ಅಲ್ಲಾಡುತ್ತದೆ ಎಂದು ಬಿಜೆಪಿಯ ರಾಜ್ಯಾಧ್ಯಕ್ಷರ ಹೇಳಿಕೆಗೆ ಪ್ರತಿಕ್ರಿಯಿಸಿದ ಸತೀಶ್ ಜಾರಕಿಹೊಳಿ ಸ್ವಲ್ಪಮಟ್ಟಿಗೆ ಅಲುಗಾಡಬಹುದು. ಆದ–'ರೆ ಏನೂ ಆಗುವುದಿಲ್ಲ. ಎರಡು ಮೂರು ದಿನಗಳ ಕಾಲ ಆ ರೀತಿಯಾಗಬಹುದು, ಆಮೇಲೆ ಎಲ್ಲವೂ ಸರಿಹೋಗುತ್ತದೆ ಎಂದರು.

ಕಾಂಗ್ರೆಸ್ಸಿನಲ್ಲೂ ಮೂರು ಸಿಎಂಗಳಾಗುತ್ತಾರೆ ಎಂಬುದು ಸರಿಯಲ್ಲ. ಡಿ.ಕೆ.ಶಿವಕುಮಾರ್ ಅವರೇ ಮುಂದುವರೆಯುತ್ತಾರೆ. ನಮ ಸರ್ಕಾರ ಗಟ್ಟಿಯಾಗಿದೆ ಎಂದರು.ಧಾರವಾಡ ವಿಧಾನಸಭಾ ಕ್ಷೇತ್ರಕ್ಕೆ ಉಪ ಚುನಾವಣೆ ಘೋಷಣೆಯಾಗುವ ಮುನ್ನವೇ ಚರ್ಚೆ ಮಾಡುವ ಅಗತ್ಯ ಇಲ್ಲ. ಅಲ್ಲಿ ನಾವು ಯಾರನ್ನೂ ಗುರಿ ಮಾಡುತ್ತಿಲ್ಲ. ಕೆಲ ಜವಾಬ್ದಾರಿಗಳ ಹಿನ್ನೆಲೆಯಲ್ಲಿ ತಾವು ಭೇಟಿ ಮಾಡಿದ್ದು ನಿಜ. ಚುನಾವಣೆ ಬಂದಾಗ ಕೆಲಸ ಮಾಡಬೇಕಾಗುತ್ತದೆ ಎಂದು ಹೇಳಿದರು.

# ರಾಜ್ಯ ಆಂಧ್ರ ನೀರಾವರಿ ಯೋಜನೆಗಳಿಗೆ ತೆಲಂಗಾಣದಿಂದ ಆಕ್ಷೇಪ

### ಮಾನ್ವಿ ತಾಲ್ಲೂಕಿನ ರಾಜಲಬಂಡ ಗ್ರಾಮದ ಬಳಿ ಇರುವ ಎಡಿಎಸ್ ಅಣೆಕಟ್ಟು ಸ್ಥಳಕ್ಕೆ ತೆಲಂಗಾಣ ಬಿಆರ್‌ಎಸ್ ನಾಯಕರು ಬುಧವಾರ ಭೇಟಿ ನೀಡಿ ಪರಿಶೀಲಿಸಿದರು.

❑ ನೈಜ್ಯ ದೆಸೆ ನ್ಯೂಸ್



**ಮಾನ್ವಿ: ತಾಲೂಕಿನ ರಾಜಾಲಬಂಡ ಗ್ರಾಮದ ಹತ್ತಿರ ತುಂಗಭದ್ರಾ ನದಿಗೆ ಅಡ್ಡಲಾಗಿ ನಿರ್ಮಿಸಲಾಗಿರುವ ರಾಜೋಳ್ಳಿಬಂಡಾ ತಿರುವು ನಾಲಾ ಯೋಜನೆ (ಆರ್ ಡಿಎಸ್)ಯ ಅಣೆಕಟ್ಟೆ ಸ್ಥಳಕ್ಕೆ ತೆಲಂಗಾಣ ರಾಜ್ಯದ ಭಾರತ ರಾಷ್ಟ್ರ ಸಮಿತಿ ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಆರ್.ಎಸ್. ಪ್ರವೀಣಕುಮಾರ ನೇತೃತ್ವದಲ್ಲಿ ಪಕ್ಷದ ಮಾಜಿ ಸಚಿವರು ಹಾಗೂ ಮಾಜಿ ಶಾಸಕರು ಒಳಗೊಂಡ ನೂರಕ್ಕೂ ಹೆಚ್ಚು ಮುಖಂಡರು ಬುಧವಾರ ಭೇಟಿ ನೀಡಿ ಪರಿಶೀಲಿಸಿದರು.**

ರಾಜೋಳ್ಳಿಬಂಡಾ ತಿರುವು ನಾಲಾ ಯೋಜನೆಯ ಅಣೆಕಟ್ಟೆ ವ್ಯಾಪ್ತಿಯಲ್ಲಿ ಕರ್ನಾಟಕ ಹಾಗೂ ಆಂಧ್ರ ಪ್ರದೇಶ ರಾಜ್ಯಗಳಿಂದ ಕೈಗೊಳ್ಳಲಾಗಿರುವ ವಿವಿಧ ನೀರಾವರಿ ಹಾಗೂ ಕುಡಿಯುವನೀರಿನಯೋಜನೆಗಳಕಾಮಗಾರಿಹಾಗೂ ಅಣೆಕಟ್ಟೆ ಪ್ರದೇಶವನ್ನು ಅವರು ಪರಿಶೀಲಿಸಿದರು. ತೆಲಂಗಾಣದ ಮಾಜಿ ಸಚಿವ ಶ್ರೀನಿವಾಸಗೌಡ ಮಾತನಾಡಿ, 'ತೆಲಂಗಾಣದ ಮುಖ್ಯಮಂತ್ರಿ ರೇವಂತರೆಡ್ಡಿ ತೆಲಂಗಾಣ ರಾಜ್ಯದ ಹಿತಾಸಕ್ತಿಯನ್ನು ಮರೆತಿದ್ದಾರೆ. ತುಂಗಭದ್ರಾ ನದಿ ನೀರು ಹಂಚಿಕೆಯ ಕುರಿತು ಈ ಹಿಂದೆ ಕೈಗೊಳ್ಳಲಾಗಿದ್ದ ಅಂತರರಾಜ್ಯ ನೀರಿನ ಹಂಚಿಕೆ ಒಪ್ಪಂದವನ್ನು ಉಲ್ಲಂಘಿಸಿ ಅಣೆಕಟ್ಟೆ ವ್ಯಾಪ್ತಿಯಲ್ಲಿ ಕರ್ನಾಟಕ ಹಾಗೂ ಆಂಧ್ರ ಪ್ರದೇಶ ರಾಜ್ಯಗಳು ಕೃಷಿ ಹಾಗೂ ಕುಡಿಯುವ ನೀರಿನ ಯೋಜನೆಯ ಹೆಸರಿನಲ್ಲಿ ಏತ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿವೆ' ಎಂದು ದೂರಿದರು.

'ತೆಲಂಗಾಣ ರಾಜ್ಯ ಸರ್ಕಾರ ಈ ನೀರಾವರಿ ಯೋಜನೆಗಳ ಕಾಮಗಾರಿಗಳಿಗೆ ವಿರೋಧ ವ್ಯಕ್ತಪಡಿಸುತ್ತಿಲ್ಲ. ಕಾಮಗಾರಿಗಳ ಸ್ಥಳ ಪರಿಶೀಲನೆ ನಡೆಸಿ ತೆಲಂಗಾಣ ರಾಜ್ಯಕ್ಕೆ ಆಗುತ್ತಿರುವ ಅನ್ಯಾಯವನ್ನು ಕೂಡ ಸರಿಪಡಿಸುತ್ತಿಲ್ಲ' ಎಂದು ಅಸಮಾಧಾನ ವ್ಯಕ್ತಪಡಿಸಿದರು. 'ತೆಲಂಗಾಣದ ನೀರಾವರಿ ಸಚಿವರು ಕೂಡ ನೀರಾವರಿ ಇಲಾಖೆಯ ಉನ್ನತ ಅಧಿಕಾರಿಗಳೊಂದಿಗೆ ಸಭೆ ನಡೆಸಿಲ್ಲ. ರಾಜಲಬಂಡಾ ತಿರುವು ನಾಲಾ ಯೋಜನೆಯ ಅಣೆಕಟ್ಟೆಯ ವ್ಯಾಪ್ತಿಯಲ್ಲಿ ಕರ್ನಾಟಕ ಹಾಗೂ ಆಂಧ್ರಪ್ರದೇಶ, ತೆಲಂಗಾಣ ಸರ್ಕಾರಗಳು ಜಂಟಿಯಾಗಿ ಸಭೆಗಳನ್ನು ನಡೆಸಿ, ಕಾಮಗಾ–ರಿಗಳಿಗೆ ಒಪ್ಪಿಗೆ ಪಡೆದ ನಂತರವೇ ಕಾಮಗಾ–ರಿಗಳನ್ನು ಕೈಗೊಳ್ಳಬೇಕು. ಕೂಡಲೇ ಕರ್ನಾಟಕ ಹಾಗೂ ಆಂಧ್ರ ಪ್ರದೇಶಗಳು ಕೈಗೊಂಡಿರುವ ನೀರಾವರಿ ಯೋಜನೆಗಳ ಕಾಮಗಾರಿಗಳನ್ನು ಸ್ಥಗಿತಗೊಳಿಸಬೇಕು' ಎಂದು ಒತ್ತಾಯಿಸಿದರು.

ಬಿಆರ್‌ಎಸ್ ಪ್ರಧಾನ ಕಾರ್ಯದರ್ಶಿ ಆರ್.ಎಸ್. ಪ್ರವೀಣಕುಮಾರ ಮಾತನಾಡಿ, 'ಒಪ್ಪಂದದ ಪ್ರಕಾರ ತೆಲಂಗಾಣ ರಾಜ್ಯಕ್ಕೆ ತುಂಗಭದ್ರಾ ನದಿಯ ನೀರು ನಿಗದಿತ ಪ್ರಮಾಣದಲ್ಲಿ ತಲುಪದ ಕಾರಣ ತೆಲಂಗಾಣ ರಾಜ್ಯದ ಅಲಂಪುರ್ ಹಾಗೂ ಮಹಬೂಬ್ ನಗರ ಜಿಲ್ಲೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗಿದೆ. ಕೃಷಿ ಚಟುವಟಿಕೆಗಳಿಗೆ ನೀರಿನ ಅಭಾವ ಇದೆ' ಎಂದರು.

'ರಾಜೋಳ್ಳಿಬಂಡಾ ತಿರುವು ನಾಲಾ ಯೋಜನೆಯ ಅಣೆಕಟ್ಟೆ ವ್ಯಾಪ್ತಿಯಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳಿಗೆ ಸುಮಾರು 2 ಟಿಎಂಸಿ ನೀರು ಬಳಕೆ ಮಾಡಲಾಗುತ್ತಿರುವ ಕುರಿತು ಸಂಪೂರ್ಣ ಮಾಹಿತಿಯನ್ನು ಭಾರತ ರಾಷ್ಟ್ರ ಸಮಿತಿ ರಾಷ್ಟ್ರೀಯ ಅಧ್ಯಕ್ಷರಿಗೆ ಹಾಗೂ ತೆಲಂಗಾಣ ಸರ್ಕಾರಕ್ಕೆ ಸಲ್ಲಿಸಲಾಗುವುದು. ನಮ್ಮ ರಾಜ್ಯದ ತುಂಗಭದ್ರಾ ನದಿ ನೀರಿನ ಹಕ್ಕಿಗಾಗಿ ಮುಂದಿನ ದಿನಗಳಲ್ಲಿ ಬೃಹತ್ ಹೋರಾಟ ಹಮ್ಮಿಕೊಳ್ಳಲಾಗುವುದು' ಎಂದು ತಿಳಿಸಿದರು. ತೆಲಂಗಾಣದ ಮಾಜಿ ಸಚಿವ ಲಕ್ಷ್ಮೀರೆಡ್ಡಿ ಜಡಚರ್ಲ, ವಿಧಾನ ಪರಿಷತ್ ಸದಸ್ಯ ನವೀನ್ ಕುಮಾರ ರೆಡ್ಡಿ, ಚಲ್ಲಾ ವೆಂಕಟರಾಮರೆಡ್ಡಿ, ಮಾಜಿ ಶಾಸಕ ರಾಮಮೋಹನ್ ರೆಡ್ಡಿ, ನರೇಂದ್ರ ರೆಡ್ಡಿ, ಜಯಪಾಲ ಯಾದವ ಉಪಸ್ಥಿತರಿದ್ದರು.

ತಹಶೀಲ್ದಾರ್ ಭೇಟಿ –: ಮಾನ್ವಿ ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ಸ್ಥಳಕ್ಕೆ ಭೇಟಿ ನೀಡಿ ಬಿಆರ್–ಎಸ್ ಮುಖಂಡರೊಂದಿಗೆ ಚರ್ಚಿಸಿದರು. ನಂತರ ಮಾತನಾಡಿದ ಅವರು, 'ಅಣೆಕಟ್ಟೆ ವ್ಯಾಪ್ತಿಯಲ್ಲಿ ಒಪ್ಪಂದದ ಪ್ರಕಾರ ಕುಡಿಯುವ ನೀರಿನ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಈ ಕುರಿತು ಜಿಲ್ಲಾಡಳಿತಕ್ಕೆ ಲಿಖಿತವಾಗಿ ಕೇಳಿದರೆ ಅಗತ್ಯ ದಾಖಲೆಗಳನ್ನು ಒದಗಿಸಲಾಗುವುದು' ಎಂದು ತಿಳಿಸಿದರು.

ಸಣ್ಣ ನೀರಾವರಿ ಇಲಾಖೆಯ ರಾಯಚೂರು ವಿಭಾಗದ ಎಇಇ ಲೋಕೇಶ ಹಾಗೂ ಇತರ ಅಧಿಕಾರಿಗಳು ಅಗತ್ಯ ಮಾಹಿತಿ ನೀಡಿದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101